ಸಂಪುಟ : 11 ಸಂಚಿಕೆ: 112 ಪುಟ : 4+2 ಬೆಲೆ: 3.00 ಗುರುವಾರ ಜೂನ್ 04 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 112 Pages : 4+2 Price : 3.00 Thursday june 04 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಭಿವೃದ್ಧಿಯ ಹರಿಕಾರನಿಗೆ ಅನ್ಯಾಯ? ಹೆಚ್.ಕೆ. ಕೈಬಿಟ್ಟ ಹೈಕಮಾಂಡ್ ವಿರುದ್ಧ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸಚಿವ ಸಂಪುಟದ ಮೊದಲ ಪಟ್ಟಿಯಲ್ಲಿ ಹಿರಿಯ ಕಾಂಗ್ರೆಸ್ ನಾಯಕ, ಗದುಗಿನ ಅಭಿವೃದ್ಧಿಯ ಹರಿಕಾರ ಹಾಗೂ ಮಾಜಿ ಸಚಿವ ಹೆಚ್.ಕೆ. ಪಾಟೀಲರಿಗೆ ಸ್ಥಾನ ನೀಡದಿರುವುದು ಗದಗ ಕಾಂಗ್ರೆಸ್ ವಲಯದಲ್ಲಿ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ. ಕಾಂಗ್ರೆಸ್ ಹೈಕಮಾಂಡ್ ನಿರ್ಧಾರಕ್ಕೆ ಕಾಂಗ್ರೆಸ್ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ ಪ್ರಮಾಣ ವಚನ ಸ್ವೀಕರಿಸಿರುವುದು ಪಕ್ಷದ ಕಾರ್ಯಕರ್ತರಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ. ಆದರೆ ಪ್ರಾಮಾಣಿಕ, ಅನುಭವಿ ಹಾಗೂ ದಕ್ಷ ಆಡಳಿತಗಾರರಾದ ಹೆಚ್.ಕೆ. ಪಾಟೀಲರನ್ನು ಮೊದಲ ಸಚಿವ ಸಂಪುಟ ಪಟ್ಟಿಯಿಂದ ಹೊರಗಿಡಲಾಗಿದೆ. ಇದು ಗದಗ ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರಿಗೆ ಭಾರೀ ಶಾಕ್ ನೀಡಿದೆ" ಎಂದು ಹೇಳಿದ್ದಾರೆ.

ಕಾನೂನು ಹಾಗೂ ಪ್ರವಾಸೋದ್ಯಮ ಸಚಿವರಾಗಿ ರಾಜ್ಯ ಮಟ್ಟದಲ್ಲಿ ತಮ್ಮದೇ ಛಾಪು ಮೂಡಿಸಿದ್ದ ಹೆಚ್.ಕೆ. ಪಾಟೀಲರು, ಗದಗ ಜಿಲ್ಲಾ ಉಸ್ತುವಾರಿ ಸಚಿವರಾಗಿ ಅನೇಕ ಜನಪರ ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಜಾರಿಗೆ ತಂದಿದ್ದಾರೆ. ಜಿಲ್ಲೆಯ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ ನಾಯಕರನ್ನು ಕಡೆಗಣಿಸಿರುವುದು ಬೇಸರ ಮೂಡಿಸಿದೆ ಎಂದು ಖಾಲಿದ್ ಕೊಪ್ಪಳ ಹೇಳಿದ್ದಾರೆ.

"ಪಕ್ಷ ಸಂಕಷ್ಟದಲ್ಲಿದ್ದಾಗ ನಿಷ್ಠೆಯಿಂದ ದುಡಿದ ಹಿರಿಯ ನಾಯಕರಿಗೆ ನ್ಯಾಯ ಸಿಗಲೇಬೇಕು. ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಹೆಚ್.ಕೆ. ಪಾಟೀಲರಿಗೆ ಅವಕಾಶ ನೀಡುವ ಮೂಲಕ ಹೈಕಮಾಂಡ್ ತಪ್ಪು ಸರಿಪಡಿಸಬೇಕು" ಎಂದು ಆಗ್ರಹಿಸಿದ್ದಾರೆ.

"ಒಂದು ವೇಳೆ ಹೆಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ, ಅಲ್ಪಸಂಖ್ಯಾತ ಘಟಕದಲ್ಲಿನ ತಮ್ಮ ಹುದ್ದೆಗೆ ರಾಜೀನಾಮೆ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು" ಎಂದು ಸೈಯದ್ ಖಾಲಿದ್ ಕೊಪ್ಪಳ ಎಚ್ಚರಿಕೆ ನೀಡಿದ್ದಾರೆ.

---

**ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಿದ ಡಿಸಿ ಶ್ರೀಧರ್**

# ಮಳೆ ಹಾನಿ ಪರಿಹಾರದಲ್ಲಿ ವಿಳಂಬ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮುಂಗಾರು ಮಳೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ, ಕುಡಿಯುವ ನೀರಿನ ಪೂರೈಕೆ, ಮಳೆ ಹಾನಿ ಪರಿಹಾರ ಹಾಗೂ ಕೃಷಿ ಚಟುವಟಿಕೆಗಳಿಗೆ ಅಗತ್ಯ ಬೀಜ ಮತ್ತು ರಸಗೊಬ್ಬರಗಳ ಲಭ್ಯತೆ ಕುರಿತು ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ಬುಧವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ಮಳೆಯಿಂದ ಉಂಟಾಗುವ ಹಾನಿಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಒದಗಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ, ನಿರ್ಲಕ್ಷ್ಯ ಅಥವಾ ನಿಷ್ಕಾಳಜಿಯನ್ನು ಜಿಲ್ಲಾಡಳಿತ ಸಹಿಸುವುದಿಲ್ಲ" ಎಂದು ಎಚ್ಚರಿಸಿದರು.

ಸಭೆಯಲ್ಲಿ ಮನೆ ಹಾನಿ, ಬೆಳೆ ಹಾನಿ, ಕುಡಿಯುವ ನೀರಿನ ಸಮಸ್ಯೆ, ಸಾರ್ವಜನಿಕ ಆಸ್ತಿಪಾಸ್ತಿಗಳ ಹಾನಿ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಅಪೂರ್ಣ ಅಥವಾ ಸುಳ್ಳು ಮಾಹಿತಿ ನೀಡುವುದನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಹೇಳಿದರು.

> "ಮಳೆ ಹಾನಿ ಪರಿಹಾರ ವಿತರಣೆಯಲ್ಲಿ ವಿಳಂಬ ಅಥವಾ ನಿರ್ಲಕ್ಷ್ಯ ಕಂಡುಬಂದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು."
> **- ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ**



**ಗೈರಾದ ಅಧಿಕಾರಿಗೆ ಶೋಕಾಸ್ ನೋಟಿಸ್**

ಸಭೆಗೆ ಅಂತರ್ಜಲ ಇಲಾಖೆಯ ಹಿರಿಯ ಭೂವಿಜ್ಞಾನಿಗಳು ಗೈರಾಗಿದ್ದಲ್ಲದೇ ಅಗತ್ಯ ಮಾಹಿತಿಯನ್ನು ಸಮರ್ಪಕವಾಗಿ ಒದಗಿಸದಿರುವುದನ್ನು ಜಿಲ್ಲಾಧಿಕಾರಿಗಳು ಗಂಭೀರವಾಗಿ ಪರಿಗಣಿಸಿದರು. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಅಧಿಕಾರಿಗೆ ಶೋಕಾಸ್ ನೋಟಿಸ್ ಜಾರಿಗೊಳಿಸಲು ಸೂಚನೆ ನೀಡಿದರು.

ತಾಲ್ಲೂಕುವಾರು ಮಳೆಯಿಂದ ಹಾನಿಗೀಡಾದ ಮನೆಗಳು, ಬೆಳೆಗಳು ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗಳ ಮಾಹಿತಿ ಪಡೆದು ಅರ್ಹ ಫಲಾನುಭವಿಗಳಿಗೆ ತ್ವರಿತ ಪರಿಹಾರ ವಿತರಣೆ ಮಾಡಬೇಕು ಎಂದು ಸೂಚಿಸಿದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆ ವ್ಯತ್ಯಯವಾಗದಂತೆ ಅಧಿಕಾರಿಗಳು ನಿರಂತರ ನಿಗಾವಹಿಸಬೇಕು. ಪ್ರವಾಹ ಸಾಧ್ಯತೆ ಇರುವ ತಗ್ಗು ಪ್ರದೇಶಗಳ ಕುಟುಂಬಗಳನ್ನು ಮುಂಚಿತವಾಗಿ ಗುರುತಿಸಿ ಅಗತ್ಯವಿದ್ದರೆ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಬೇಕು ಎಂದು ನಿರ್ದೇಶನ ನೀಡಿದರು. ಸಣ್ಣ ನೀರಾವರಿ ಇಲಾಖೆಗೆ ಸಂಬಂಧಿಸಿದ 23 ಕೆರೆಗಳ ನಿರ್ವಹಣೆ, ನೀರು ಸಂಗ್ರಹ ಸಾಮರ್ಥ್ಯ ವೃದ್ಧಿ ಹಾಗೂ ಅಗತ್ಯ ಕಾಮಗಾರಿಗಳ ಕುರಿತು ಚರ್ಚೆ ನಡೆಸಿದ ಜಿಲ್ಲಾಧಿಕಾರಿಗಳು, ಸರ್ಕಾರಕ್ಕೆ ಅಗತ್ಯ ಅನುದಾನ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು. ಪ್ರವಾಹ ಪರಿಸ್ಥಿತಿಯಲ್ಲಿ ರಕ್ಷಣಾ ಕಾರ್ಯಗಳಿಗೆ ಅಗ್ನಿಶಾಮಕ ಇಲಾಖೆಗೆ ಅಗತ್ಯ ಬೋಟ್‌ಗಳ ಖರೀದಿಗಾಗಿ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಭೆಯಲ್ಲಿ ನೀಡಿದ ಮಾಹಿತಿಯ ಪ್ರಕಾರ, ಮೇ 18ರಂದು ಸುರಿದ ಭಾರಿ ಮಳೆ ಹಾಗೂ ಬಿರುಗಾಳಿಯಿಂದ ಗದಗ ಮತ್ತು ಲಕ್ಷ್ಮೇಶ್ವರ ತಾಲ್ಲೂಕುಗಳಲ್ಲಿ ತಲಾ ಒಬ್ಬರಂತೆ ಇಬ್ಬರು ಮೃತಪಟ್ಟಿದ್ದು, ಮೃತರ ಕುಟುಂಬಗಳಿಗೆ ತಲಾ ₹5 ಲಕ್ಷ ಪರಿಹಾರ ವಿತರಿಸಲಾಗಿದೆ.

**ರೈತರಿಗೆ ಗೊಬ್ಬರಕ್ಕಾಗಿ ಬಲವಂತ ಬೇಡ!**

ಮುಂಗಾರು ಹಂಗಾಮು ಆರಂಭವಾಗಿರುವುದರಿಂದ ರೈತರಿಗೆ ಅಗತ್ಯ ಬೀಜ ಮತ್ತು ರಸಗೊಬ್ಬರ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಯೂರಿಯಾ ವಿತರಣೆಯ ವೇಳೆ ರೈತರಿಗೆ ಅನಗತ್ಯವಾಗಿ ಇತರೆ ಗೊಬ್ಬರ ಖರೀದಿಸಲು ಒತ್ತಾಯಿಸಿದರೆ ಸಂಬಂಧಿಸಿದವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಸಿದರು.

▶▶3ನೇ ಪುಟಕ್ಕೆ

---

**ಜಾಗೃತಿ ಜಾಥಾ, ವಿಶೇಷ ಅಭಿಯಾನ-ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಖಡಕ್ ಸೂಚನೆ**

# ಜೂ.12ರಿಂದ ಮಕ್ಕಳ ರಕ್ಷಣೆಗೆ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಬಾಲಕಾರ್ಮಿಕರ ವಿರೋಧಿ ದಿನಾಚರಣೆಯನ್ನು ಜೂನ್ 12ರಂದು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಅರ್ಥಪೂರ್ಣ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆ ಹಾಗೂ ಜಿಲ್ಲಾ ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿಷ್ಟಾಚಾರದಂತೆ ಆಮಂತ್ರಣ ಮುದ್ರಣ, ಗ್ರಾಮ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆ ವ್ಯಾಪ್ತಿಯಲ್ಲಿ ಡಂಗುರ ಸಾರುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.



ಸರ್ಕಾರಿ ಕಚೇರಿಗಳಲ್ಲಿ ಬಾಲಕಾರ್ಮಿಕ ವಿರೋಧಿ ಪ್ರಮಾಣ ವಚನ ಸ್ವೀಕಾರ, ಶಾಲಾ-ಕಾಲೇಜುಗಳಲ್ಲಿ ಜಾಥಾ ಕಾರ್ಯಕ್ರಮ, ಪ್ರಬಂಧ, ಚಿತ್ರಕಲೆ ಹಾಗೂ ಭಾಷಣ ಸ್ಪರ್ಧೆಗಳನ್ನು ಆಯೋಜಿಸಿ ವಿಜೇತ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಬೇಕು ಎಂದು ಸೂಚಿಸಿದರು. ಜಿಲ್ಲೆಯಾದ್ಯಂತ ಜೂನ್ 13ರಿಂದ 30ರವರೆಗೆ ಬಾಲ ಮತ್ತು ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನ ಹಮ್ಮಿಕೊಳ್ಳಲಾಗುವುದು. ಬಾಲಕಾರ್ಮಿಕ ವಿರೋಧಿ ಸಂದೇಶ ಸಾರುವ ಧ್ವನಿ ಮುದ್ರಿಕೆಗಳನ್ನು ಜಿಲ್ಲೆಯಾದ್ಯಂತ ಪ್ರಸಾರ ಮಾಡಲು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಅಲಂಕಾರ ಹಾಗೂ ಸ್ಪರ್ಧೆಗಳ ಆಯೋಜನೆ ಕುರಿತು ಚರ್ಚೆ ನಡೆಯಿತು.


> "ಲಿಂ. ಜಗದ್ಗುರುಗಳ ಆಶೀರ್ವಾದ ಮತ್ತು ಪಕ್ಷ ನಿಷ್ಠೆಯ ಫಲವಾಗಿ ಡಿಕೆ ಶಿವಕುಮಾರ ಮುಖ್ಯಮಂತ್ರಿ ಸ್ಥಾನಕ್ಕೇರಿದ್ದಾರೆ."
> **- ಜಿ.ಎಸ್. ಗಡ್ಡದೇವರಮಠ, ಮಾಜಿ ಶಾಸಕ**

▶▶2ನೇ ಪುಟಕ್ಕೆ

---

**ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಎಚ್ಚರಿಕೆ; ಉತ್ತರ ಕರ್ನಾಟಕ ಅಲ್ಪಸಂಖ್ಯಾತ ಶಾಸಕರಿಗೂ ಸಚಿವ ಸ್ಥಾನಕ್ಕೆ ಆಗ್ರಹ**

## ಜಮೀರ್‌ಗೆ ಡಿಸಿಎಂ ಪಟ್ಟ ಕೊಡದಿದ್ದರೆ ರಾಜ್ಯಾದ್ಯಂತ ಹೋರಾಟ!



■ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ ಮುಂಬರುವ ಸಚಿವ ಸಂಪುಟದಲ್ಲಿ ಸೂಕ್ತ ಸಚಿವ ಸ್ಥಾನ ಹಾಗೂ ಉಪಮುಖ್ಯಮಂತ್ರಿ ಹುದ್ದೆ ನೀಡಬೇಕು. ಇಲ್ಲವಾದರೆ ರಾಜ್ಯಾದ್ಯಂತ ತೀವ್ರ ಹೋರಾಟ ನಡೆಸಲಾಗುವುದು ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಎಚ್ಚರಿಕೆ ನೀಡಿದೆ.

ನಗರದಲ್ಲಿ ಬುಧವಾರ ನಡೆದ ತುರ್ತು ಖಂಡನಾ ಸಭೆಯಲ್ಲಿ ಮಾತನಾಡಿದ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ, "ಜಮೀರ್ ಅಹ್ಮದ್ ಖಾನ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗದೆ, ಬಡವರು, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪಕ್ಷದ ಸಂಘಟನೆ ಹಾಗೂ ಚುನಾವಣಾ ಯಶಸ್ಸಿನಲ್ಲಿ ಅವರ ಕೊಡುಗೆ ಅನನ್ಯವಾಗಿದೆ" ಎಂದು ಹೇಳಿದರು.

"ಇತ್ತೀಚೆಗೆ ಕೆಲ ರಾಜಕೀಯ ವಿರೋಧಿಗಳು ಹಾಗೂ ಪಟ್ಟಭದ್ರ ಹಿತಾಸಕ್ತಿಗಳು ಅವರ ಜನಪ್ರಿಯತೆಯನ್ನು ಸಹಿಸದೇ ವ್ಯವಸ್ಥಿತ ಷಡ್ಯಂತ್ರ ರೂಪಿಸುತ್ತಿದ್ದಾರೆ. ಅವರ ವಿರುದ್ಧದ ಆರೋಪಗಳು ರಾಜಕೀಯ ಪ್ರೇರಿತ ಮತ್ತು ನಿರಾಧಾರ" ಎಂದು ಆರೋಪಿಸಿದರು.

"ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಜಮೀರ್ ಅಹ್ಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದು ಅನಿವಾರ್ಯ. ಜೊತೆಗೆ ಉತ್ತರ ಕರ್ನಾಟಕದ ಅಲ್ಪಸಂಖ್ಯಾತ ಸಮುದಾಯದ ಶಾಸಕರಿಗೂ ಸಚಿವ ಸ್ಥಾನ ನೀಡಬೇಕು" ಎಂದು ಆಗ್ರಹಿಸಿದರು.

ಜಿಲ್ಲಾಧ್ಯಕ್ಷ ಜಾಫರ್ ಡಾಲಾಯತ್ ಮಾತನಾಡಿ, "ಸರ್ಕಾರ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸದಿದ್ದರೆ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು" ಎಂದು ಎಚ್ಚರಿಸಿದರು.

ಗದಗ ಶಹರ ಅಧ್ಯಕ್ಷ ತಾಜುದ್ದೀನ್ ಪಾಪಣ್ಣನವರ್ ಮಾತನಾಡಿ, "ಯಾವುದೇ ರಾಜಕೀಯ ಪಿತೂರಿಗಳಿಗೆ ಮಣಿಯದೆ ಜಮೀರ್ ಅಹ್ಮದ್ ಖಾನ್ ಅವರಿಗೆ ಸೂಕ್ತ ಸ್ಥಾನಮಾನ ಘೋಷಿಸಬೇಕು" ಎಂದು ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ರಿಯಾಜ್ ಅಹ್ಮದ್ ದೊಡ್ಡಮನಿ, ಕುತ್ಬುದ್ದೀನ್ ಶೇಖ್, ಭಾಷಾಸಾಬ್ ಖಾಜಿ, ರಫೀಕ್ ಈಟಿ, ನಿಜಾಮುದ್ದೀನ್ ಕಾಟಾಪುರ ಸೇರಿದಂತೆ ಮಹಾಸಭಾದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

---

**ಲಿಂ. ವೀರಗಂಗಾಧರ ಜಗದ್ಗುರುಗಳ ಹೆಸರಿನಲ್ಲಿ ಪ್ರಮಾಣವಚನ-ಕಾಂಗ್ರೆಸ್ ಕಾರ್ಯಕರ್ತರಿಂದ ಸಂಭ್ರಮಾಚರಣೆ**

# ಡಿಕೆಶಿ ಸಿಎಂ- ಮುಕ್ತಿಮಂದಿರದಲ್ಲಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ ಲಿಂ. ವೀರಗಂಗಾಧರ ಜಗದ್ಗುರುಗಳ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ತಪೋಭೂಮಿ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿ ಸಂಭ್ರಮಾಚರಣೆ ನಡೆಸಿದರು.

ಲಿಂ. ಜಗದ್ಗುರುಗಳ ಕರ್ತೃ ಗದ್ದುಗೆಗೆ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ ಹಾಗೂ ರಾಮಣ್ಣ ಲಮಾಣಿ, "ಪಕ್ಷವನ್ನು ಸಮರ್ಥವಾಗಿ ಮುನ್ನಡೆಸಿದ ಡಿಕೆ ಶಿವಕುಮಾರ ಅವರಿಗೆ ಮುಖ್ಯಮಂತ್ರಿ ಸ್ಥಾನ ದೊರೆತಿರುವುದು ಸಂತಸದ ಸಂಗತಿ. ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಸುಭದ್ರ ಆಡಳಿತ ನಡೆಯಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಡಿ.ಕೆ. ಶಿವಕುಮಾರ ಅವರು ಪಕ್ಷದ ಸಂಕಷ್ಟದ ಸಮಯದಲ್ಲಿ ಬಂಡೆಯಂತೆ ನಿಂತು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಅನೇಕ ರಾಜಕೀಯ ಸವಾಲುಗಳ ನಡುವೆಯೂ ಪಕ್ಷ ನಿಷ್ಠೆ ಮೆರೆದಿರುವುದು ಶ್ಲಾಘನೀಯ ಎಂದು ಹೇಳಿದರು.

> "ಲಿಂ. ಜಗದ್ಗುರುಗಳ ಆಶೀರ್ವಾದ ಮತ್ತು ಪಕ್ಷ ನಿಷ್ಠೆಯ ಫಲವಾಗಿ ಡಿಕೆ ಶಿವಕುಮಾರ ಮುಖ್ಯಮಂತ್ರಿ ಸ್ಥಾನಕ್ಕೇರಿದ್ದಾರೆ."
> **- ಜಿ.ಎಸ್. ಗಡ್ಡದೇವರಮಠ, ಮಾಜಿ ಶಾಸಕ**

ಲಿಂ. ವೀರಗಂಗಾಧರ ಶಿವಾಚಾರ್ಯ ಭಗವತ್ಪಾದರುಗಳ ಮೇಲೆ ಡಿಕೆಶಿ ಅವರಿಗೆ ಅಪಾರ ಭಕ್ತಿ ಹಾಗೂ ನಂಬಿಕೆ ಇತ್ತು. ಇತ್ತೀಚೆಗೆ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಭೇಟಿ ನೀಡಿ, ಪ್ರಸ್ತುತ ಪಟ್ಟಾಧ್ಯಕ್ಷರಾದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಮಾರ್ಗದರ್ಶನದಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದರು. ಅದೇ ಆಶೀರ್ವಾದದ ಫಲವಾಗಿ ಅವರು ಮುಖ್ಯಮಂತ್ರಿ ಸ್ಥಾನಕ್ಕೇರಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ನಗರ ಅಧ್ಯಕ್ಷ ಅಮರೇಶ ತೆಂಬದಮನಿ, ಜಯಕ್ಕ ಕಳ್ಳಿ, ಶರಣು ಗೋಡಿ, ಮುತ್ತಣ್ಣ ಗಡೆಪ್ಪನವರ, ಸುಭಾಸ ಓದುನವರ, ಸೋಮನಗೌಡ್ರ ಪಾಟೀಲ (ಎಲಿಬಳ್ಳಿ), ಬಸವರಾಜ ಓದುನವರ, ಪರಮೇಶ ಲಮಾಣಿ, ನಾಗರಾಜ ಚಿಂಚಲಿ, ಕಿರಣ ನವಲೆ, ಮೌನೇಶ ಬಾಲೇಹೊಸೂರು, ಬಸವರೆಡ್ಡಿ ಹನುಮರೆಡ್ಡಿ, ಜಯಣ್ಣ ಕಲಕೋಟಿ, ರಾಮಣ್ಣ ರಿತ್ತಿ, ಛಾಯಪ್ಪ ಬಸಾಪೂರ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಜೂ.12ರಿಂದ ಮಕ್ಕಳ ರಕ್ಷಣೆಗೆ ಅಭಿಯಾನ

ಮೊದಲನೇ ಪುಟದಿಂದ

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಎಸ್. ಸೋಮನಕಟ್ಟಿ, ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧ ಮಣ್ಣೂರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯಶ್ರೀ ತೊಟಗೇರ, ನಗರಾಭಿವೃದ್ಧಿ ಯೋಜನೆ ನಿರ್ದೇಶಕ ಬಸವರಾಜ ಕೊಟೂರು, ಯೋಜನೆ ನಿರ್ದೇಶಕ ಸಂದೇಶ ಪಾಟೀಲ್, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ, ಸ್ಪಂದನ ಸಂಸ್ಥೆಯ ಎನ್‌ಜಿಒ ಅಶ್ವಿನಿ ಹಿರೇಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಕೆಪಿಸಿಸಿ ಅಧ್ಯಕ್ಷರಾಗಿ ಬಿ.ಕೆ. ಹರಿಪ್ರಸಾದ್ ನೇಮಕ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೆಪಿಸಿಸಿ ಅಧ್ಯಕ್ಷರಾಗಿ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಅವರನ್ನು ನೇಮಕ ಮಾಡಿ ಎಐಸಿಸಿ ಅಧಿಕೃತ ಆದೇಶ ಹೊರಡಿಸಿದೆ.

ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿದ ಬೆನ್ನಲ್ಲೇ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ ಹಿನ್ನಲೆಯಲ್ಲಿ ತೆರವಾದ ಸ್ಥಾನಕ್ಕೆ ತಕ್ಷಣದಿಂದ ಜಾರಿಗೆ ಬರುವಂತೆ ಬಿ.ಕೆ. ಹರಿಪ್ರಸಾದ್ ಅವರನ್ನು ನೇಮಕ ಮಾಡಲಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧಿಕೃತ ಆದೇಶದಲ್ಲಿ ತಿಳಿಸಿದ್ದಾರೆ.

### ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಪಾಲಕರು ಕೈಜೋಡಿಸಬೇಕು: ಕವಿತಾ ದಂಡಿನ

# ಮಕ್ಕಳಿಗೆ ಆಸ್ತಿ ಬೇಡ, ಶಿಕ್ಷಣವೇ ದೊಡ್ಡ ಸಂಪತ್ತು!

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಜೀವನದಲ್ಲಿ ಬಾಲ್ಯವೇ ಅತ್ಯಂತ ಮಹತ್ವದ ಘಟ್ಟವಾಗಿದ್ದು, ಈ ಹಂತದಲ್ಲಿ ಪಡೆಯುವ ಶಿಕ್ಷಣವೇ ಮಕ್ಕಳ ಭವಿಷ್ಯಕ್ಕೆ ಭದ್ರ ಅಡಿಪಾಯವಾಗುತ್ತದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ನಗರದ ರಂಗನವಾಡಿಯ ಸರ್ಕಾರಿ ಶಾಲೆ ನಂ.11ನಲ್ಲಿ ಸೋಮವಾರ ನಡೆದ ಶಾಲಾ ಪ್ರಾರಂಭೋತ್ಸವ ಹಾಗೂ ಪೋಷಕ-ಶಿಕ್ಷಕರ ಮಹಾಸಭೆ-2026-27 ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಪಾಲಕರು ಮಕ್ಕಳಿಗಾಗಿ ಆಸ್ತಿ ಮಾಡುವುದಕ್ಕಿಂತ ಅವರ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಿ, ಮಕ್ಕಳನ್ನೇ ಆಸ್ತಿಯನ್ನಾಗಿ ರೂಪಿಸಬೇಕು" ಎಂದು ಕರೆ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ ಪ್ರತಿಭಾವಂತ ಶಿಕ್ಷಕರಿಂದ ದ್ವಿಭಾಷಾ ಶಿಕ್ಷಣ ನೀಡಲಾಗುತ್ತಿದ್ದು, ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಬೇಕು ಎಂದು ಸಲಹೆ ನೀಡಿದರು.

ಅತಿಥಿಯಾಗಿ ಆಗಮಿಸಿದ್ದ ಶಿಕ್ಷಣ



ಸಂಯೋಜಕ ಮುರಳಿ ಸೋಲ್ಲಾಪೂರ ಮಾತನಾಡಿ, "ಸರ್ಕಾರಿ ಶಾಲೆಗಳಲ್ಲಿ ಮಕ್ಕಳೊಂದಿಗೆ ಆತ್ಮೀಯ ಬಾಂಧವ್ಯವಿದ್ದು, ಶಿಕ್ಷಕರು ತಮ್ಮ ಮಕ್ಕಳಂತೆ ವಿದ್ಯಾರ್ಥಿಗಳನ್ನು ಪ್ರೀತಿಯಿಂದ ಬೋಧಿಸುತ್ತಾರೆ. ಪೌಷ್ಠಿಕ ಆಹಾರ ಹಾಗೂ ಗುಣಮಟ್ಟದ ಶಿಕ್ಷಣದಿಂದ ಮಕ್ಕಳ ವ್ಯಕ್ತಿತ್ವ ವಿಕಸನ ಸಾಧ್ಯವಾಗುತ್ತದೆ" ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಎಂ.ಆರ್. ಕರಮುಡಿ ಮಾತನಾಡಿ, ಶಾಲೆಯು ಸಮುದಾಯದ ಕೇಂದ್ರಬಿಂದುವಾಗಿದ್ದು, ಪಾಲಕರು ಶಾಲೆಯೊಂದಿಗೆ ನಿರಂತರ ಸಂಪರ್ಕ ಹೊಂದಿ

> "ಪಾಲಕರು ಮಕ್ಕಳಿಗಾಗಿ ಆಸ್ತಿ ಮಾಡುವುದಕ್ಕಿಂತ, ಉತ್ತಮ ಶಿಕ್ಷಣ ನೀಡಿ ಮಕ್ಕಳನ್ನೇ ಆಸ್ತಿಯನ್ನಾಗಿ ರೂಪಿಸಬೇಕು."
> – ಕವಿತಾ ದಂಡಿನ

ಮಕ್ಕಳ ಶೈಕ್ಷಣಿಕ ಪ್ರಗತಿಗೆ ಸಹಕರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯಿನಿ ಭಾರತಿ ಕುಲಕರ್ಣಿ ಸ್ವಾಗತಿಸಿದರು. ಆರ್.ಬಿ. ಹೊಸಮನಿ ಪ್ರಾರ್ಥಿಸಿದರು. ಎಂ.ವೈ. ಕೊಳ್ಳಿ ಕಾರ್ಯಕ್ರಮ ನಿರೂಪಿಸಿದರು. ನೌರಿನ್ ಜಾಲಿಹಾಳ ವಂದಿಸಿದರು.

ಮಹಾಪೋಷಕರ ಸಭೆಯಲ್ಲಿ ವಹೀದಾ ನರೇಗಲ್ಲ, ಸುರೇಖಾ ಹಡಪದ, ತೈಷಿನ್‌ಭಾನು ಧಾರವಾಡ, ಹನುಮವ್ವ ವಾಲ್ಮೀಕಿ, ಸೈನಜ್ ಕೊಪ್ಪಳ, ಮಂಗಳಾ ಹಿರೇಮಠ, ದಿಲ್‌ಶಾದ್ ಮುಲ್ಲಾ, ಖೈರುನ್‌ಭೀ ಸರಗಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇದಕ್ಕೂ ಮುನ್ನ ಶಾಲಾ ಮಕ್ಕಳಿಗೆ ಹೂವು ನೀಡಿ, ಆರತಿ ಬೆಳಗಿ, ಸಿಹಿ ಹಂಚುವ ಮೂಲಕ ಹಬ್ಬದ ವಾತಾವರಣದಲ್ಲಿ ಆತ್ಮೀಯವಾಗಿ ಶಾಲೆಗೆ ಬರಮಾಡಿಕೊಳ್ಳಲಾಯಿತು.

# ಬಡ ವಿದ್ಯಾರ್ಥಿಗಳಿಗೆ ಅಗಡಿ ಸಂಸ್ಥೆಯ ನೆರವಿನ ಹಸ್ತ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ ನೀಡುವ ಮಹಾದಾಸೆಯಿಂದ ಲಕ್ಷ್ಮೇಶ್ವರದಲ್ಲಿ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯ, ಆಸ್ಪತ್ರೆ ಹಾಗೂ ದೇವಸ್ಥಾನ ಸ್ಥಾಪಿಸುವಲ್ಲಿ ದಿ. ಶ್ರೀ ವೆಂಕಪ್ಪ ಎಂ. ಅಗಡಿಯವರಿಗೆ ಬೆನ್ನೆಲುಬಾಗಿ ನಿಂತು ಅವರ ಕನಸನ್ನು ಸಾಕಾರಗೊಳಿಸಿದವರು ಶ್ರೀಮತಿ ಕಮಲಮ್ಮ ವಿ. ಅಗಡಿ ಎಂದು ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪರಶುರಾಮ್ ಬಾರಕಿ ಹೇಳಿದರು.

ಲಕ್ಷ್ಮೇಶ್ವರದ ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಘಟಕ ಹಾಗೂ ಅದ್ವಿತಾ ಲೇಡೀಸ್ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಶಾಲಾ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಗಡಿ ಸಂಸ್ಥೆಯ ಶಿಕ್ಷಣ, ಆರೋಗ್ಯ ಹಾಗೂ ಧಾರ್ಮಿಕ ಸೇವೆಗಳು ಸಮಾಜಕ್ಕೆ ಅನನ್ಯ ಕೊಡುಗೆ ನೀಡಿದ್ದು, ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯ ಆಡಳಿತಾಧಿಕಾರಿ ಪ್ರೊ. ವಿಕ್ರಂ ಶಿರೋಳ, ಡಾ. ಸುಭಾಸ್ ಮೇಟಿ, ಡಾ. ಆರ್. ಎಂ. ಪಾಟೀಲ, ರವಿ ಪ್ರಕಾಶ, ಪ್ರೊ. ಪ್ರಕಾಶ ಹೊಂಗಲ, ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ರಾಜೇಶ್ವರಿ ಗಾಮನಗಟ್ಟಿ ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ನೂರಾರು ಬಡ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಪ್ರೊ. ಸಾವಿತ್ರಿ ವಾಲಿ, ಪ್ರೊ. ಕಿರಣ್ ಕೋತಿನ ಹಾಗೂ ವಿದ್ಯಾರ್ಥಿಗಳಾದ ಸಾನಿಯಾ, ಸುಚಿತಾ, ಸವಿತಾ, ರಮೇಶರೆಡ್ಡಿ ಕಾರ್ಯಕ್ರಮ ನಿರ್ವಹಿಸಿದರು.

### ಡಂಬಳ ಹೋಬಳಿಯ 24 ಗ್ರಾಮಗಳಲ್ಲಿ ಸಂಭ್ರಮದ ಶಾಲಾರಂಭ – ಬಲೂನ್, ಸಿಹಿ, ಕಲರವದಿಂದ ಕಳೆಗಟ್ಟಿದ ಸರ್ಕಾರಿ ಶಾಲೆಗಳು!

# ಹೂಮಳೆ ನಡುವೆ ಶಾಲೆಗೆ ಪುಟಾಣಿಗಳ ಗ್ರ್ಯಾಂಡ್ ಎಂಟ್ರಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಬೇಸಿಗೆ ರಜೆಯ ಸಂಭ್ರಮ ಮುಗಿಸಿ ಮತ್ತೆ ಶಾಲೆಯ ಅಂಗಳಕ್ಕೆ ಕಾಲಿಟ್ಟ ಮಕ್ಕಳನ್ನು ಶಿಕ್ಷಕರು ಹೂಮಳೆ ಸುರಿಸಿ, ಸಿಹಿತಿಂಡಿ ನೀಡಿ, ಬಲೂನ್ ಹಂಚಿ ಆತ್ಮೀಯವಾಗಿ ಬರಮಾಡಿಕೊಂಡ ಅಪೂರ್ವ ದೃಶ್ಯ ಡಂಬಳ ಹೋಬಳಿಯ ಸರ್ಕಾರಿ ಶಾಲೆಗಳಲ್ಲಿ ಕಂಡುಬಂತು. ಹೋಬಳಿಯ 24 ಗ್ರಾಮಗಳಲ್ಲಿ ಸೋಮವಾರ ಶಾಲಾ ಪ್ರಾರಂಭೋತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಲಾಯಿತು.

ಒಂದೂವರೆ ತಿಂಗಳ ಬೇಸಿಗೆ ರಜೆಯ ಬಳಿಕ ಶಾಲೆಯತ್ತ ಹೆಜ್ಜೆ ಹಾಕಿದ ಮಕ್ಕಳು ಹೊಸ ಉತ್ಸಾಹ ಹಾಗೂ ಸಂತೋಷದಿಂದ ಶಾಲೆಗಳಿಗೆ ಆಗಮಿಸಿದರು. ಡಂಬಳ ಹೋಬಳಿಯ ಹಿರೇವಡ್ಡಟ್ಟಿ, ಪೇಠಾ ಆಲೂರು, ಹಳ್ಳಿಕೇರಿ, ಹಳ್ಳಿಗುಡಿ, ವೆಂಕಟಾಪುರ, ಬರದೂರ, ಕದಾಂಪುರ, ಡಂಬಳ, ಡೋಣಿ, ಅತ್ತಿಕಟ್ಟಿ ತಾಂಡಾ, ಡೋಣಿ ತಾಂಡಾ,



ಶಿವಾಜಿನಗರ, ಚಿಕ್ಕವಡ್ಡಟ್ಟಿ, ಮುರಡಿ, ಹಾರೂಗೇರಿ, ಮುರಡಿ ತಾಂಡಾ, ನಾರಾಯಣಪುರ ಸೇರಿದಂತೆ ವಿವಿಧ ಗ್ರಾಮಗಳ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಶಿಕ್ಷಕರು ಹೂವು, ಸಿಹಿ ತಿನಿಸು ಹಾಗೂ ಪುಸ್ತಕ ನೀಡಿ ಸ್ವಾಗತಿಸಿದರು.

ದಾಖಲಾತಿಯಲ್ಲಿರುವ ಎಲ್ಲಾ ಮಕ್ಕಳನ್ನು ಶಾಲೆಗೆ ಕರೆತರಲು ಶಿಕ್ಷಕರು ಪ್ರತಿ ಓಣಿ-ಓಣಿಗೆ ತೆರಳಿ ಪಾಲಕರಿಗೆ ಮನವಿ ಮಾಡಿದರು. ಇನ್ನೂ ಕೆಲ ಮಕ್ಕಳು ರಜೆಯ ಮೂಡ್‌ನಲ್ಲೇ ಇದ್ದ ಕಾರಣ ಮೊದಲ ದಿನ ಹಾಜರಾತಿ ಸ್ವಲ್ಪ ಕಡಿಮೆ ಕಂಡುಬಂತು.

ಹೊಸ ಬಟ್ಟೆ ಧರಿಸಿ ಶಾಲೆಗೆ ಬಂದಿದ್ದ ಮಕ್ಕಳು ಮೈದಾನದಲ್ಲಿ ಕುಣಿದು-ಕುಪ್ಪಳಿಸಿ ಸಂಭ್ರಮಿಸಿದರು. ಹಲವು ದಿನಗಳ ಬಳಿಕ ಸ್ನೇಹಿತರನ್ನು ಭೇಟಿಯಾದ ಖುಷಿ ಮಕ್ಕಳ ಮುಖದಲ್ಲಿ ಸ್ಪಷ್ಟವಾಗಿ ಕಾಣುತ್ತಿತ್ತು. ಶಾಲಾ ಆವರಣಗಳಲ್ಲಿ ಮಕ್ಕಳ ಕಲರವ, ನಗು, ಆಟ-ಪಾಠಗಳಿಂದ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಸರ್ಕಾರಿ ಶಾಲೆಗಳನ್ನು ತಳಿರು ತೋರಣ, ರಂಗೋಲಿ ಹಾಗೂ ಬಲೂನ್‌ಗಳಿಂದ ಸಿಂಗರಿಸಲಾಗಿತ್ತು. ಕೆಲ ಶಾಲೆಗಳಲ್ಲಿ ಮಕ್ಕಳಿಗೆ ಚಾಕಲೇಟ್, ಪೆನ್ನು, ಪೆನ್ಸಿಲ್ ವಿತರಿಸಿದರೆ, ಇನ್ನೂ ಕೆಲವು ಶಾಲೆಗಳಲ್ಲಿ ಹೂಮಳೆ ಸುರಿಸಿ ಸಂಭ್ರಮದಿಂದ ಬರಮಾಡಿಕೊಳ್ಳಲಾಯಿತು.

ಮೊದಲ ದಿನ ಪಾಠಕ್ಕಿಂತ ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿತ್ತು. ಮಕ್ಕಳು ನೃತ್ಯ, ಹಾಡು, ಕ್ರೀಡೆಗಳಲ್ಲಿ ಭಾಗವಹಿಸಿ ಖುಷಿಪಟ್ಟರು. ಹಲವು ದಿನಗಳ ಬಳಿಕ ಒಂದಾದ ಸ್ನೇಹಿತರೊಂದಿಗೆ ಸಮಯ ಕಳೆಯುತ್ತಾ ಶಾಲಾರಂಭವನ್ನು ಹಬ್ಬದಂತೆ ಆಚರಿಸಿದರು.

ಚುರ್ಚಿಹಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1ನೇ ತರಗತಿಗೆ ದಾಖಲಾತಿಯಾಗುವ ಮಕ್ಕಳಿಗೆ ₹1000 ಠೇವಣಿ ಇಡುವುದಾಗಿ ಶಾಲಾ ಶಿಕ್ಷಕರು ಹಾಗೂ ಎಸ್‌ಡಿಎಂಸಿ ಸದಸ್ಯರು ಘೋಷಣೆ ಮಾಡಿದರು. ಈ ಸಂದರ್ಭದಲ್ಲಿ ಸಿಆರ್‌ಪಿ ಎಸ್. ಎಂ. ಪಾಟೀಲ ಉಪಸ್ಥಿತರಿದ್ದರು.

ಡಂಬಳ ಗ್ರಾಮದ ಕಸ್ತೂರಿ ಗಾಂಧಿ ಬಾಲಕಿಯರ ವಸತಿ ಶಾಲೆ, ಸರ್ಕಾರಿ ಮಾದರಿ ಗಂಡು ಮಕ್ಕಳ ಶಾಲೆ, ಸರ್ಕಾರಿ ಹೆಣ್ಣು ಮಕ್ಕಳ ಶಾಲೆ, ಸರ್ಕಾರಿ ಡಿಪಿಇಪಿ ಶಾಲೆ ಹಾಗೂ ಸರ್ಕಾರಿ ಉರ್ದು ಶಾಲೆಗಳಲ್ಲಿ ಪಾಲಕರು ಮತ್ತು ವಿದ್ಯಾರ್ಥಿಗಳಿಗಾಗಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿ ಮಕ್ಕಳನ್ನು ಸಂಭ್ರಮದಿಂದ ಬರವಾಡಿಕೊಳ್ಳಲಾಯಿತು. ವಿದ್ಯಾರ್ಥಿಗಳಿಗೆ ಸಿಹಿ ತಿಂಡಿ ಹಾಗೂ ಊಟದ ವ್ಯವಸ್ಥೆಯನ್ನೂ ಮಾಡಲಾಗಿತ್ತು.

### ಹೂಮಳೆ, ಸಿಹಿ ಹಂಚಿಕೆ ನಡುವೆ ಜಕ್ಕಲಿಯಲ್ಲಿ ಅರ್ಥಪೂರ್ಣ ಶಾಲಾರಂಭ

# ಶಾಲೆಯಂಗಳದಲ್ಲಿ ಮತ್ತೆ ಮೊಳಗಿದ ಮಕ್ಕಳ ಕಲರವ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೇಸಿಗೆ ರಜೆಯ ಬಳಿಕ ಮತ್ತೆ ಶಾಲೆಯತ್ತ ಮರಳಿದ ಮಕ್ಕಳ ಕಿಲಕಿಲ ನಗು, ಹೂವಿನ ಸ್ವಾಗತ, ಬಣ್ಣಬಣ್ಣದ ರಂಗೋಲಿ ಹಾಗೂ ಸಂಭ್ರಮದ ವಾತಾವರಣದಿಂದ ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆ ಸೋಮವಾರ ಹಬ್ಬದ ಮನೆಯಂತೆ ಕಂಗೊಳಿಸಿತು.

2026-27ನೇ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವ, ದಾಖಲಾತಿ ಆಂದೋಲನ ಹಾಗೂ ಪಾಲಕ-ಪೋಷಕರ ಮಹಾಸಭೆ ಶಾಲೆಯಲ್ಲಿ ಅತ್ಯಂತ ಅರ್ಥಪೂರ್ಣವಾಗಿ ಮತ್ತು ಸಡಗರದಿಂದ ನೆರವೇರಿತು.

ಶಾಲಾ ಆವರಣವನ್ನು ತಳಿರು ತೋರಣ, ಹೂವಿನ ಅಲಂಕಾರ, ಸ್ವಾಗತ ಫಲಕ ಹಾಗೂ ಆಕರ್ಷಕ ರಂಗೋಲಿಗಳಿಂದ ಸಿಂಗರಿಸಲಾಗಿತ್ತು. ಶಾಲೆಗೆ ಆಗಮಿಸಿದ ಮಕ್ಕಳನ್ನು ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು ಹಾಗೂ ಪಾಲಕರು ಪುಷ್ಪವೃಷ್ಟಿ, ಆರತಿ, ಗುಲಾಬಿ ಹೂವು ಹಾಗೂ ಸಿಹಿ ಹಂಚುವ ಮೂಲಕ ಆತ್ಮೀಯವಾಗಿ ಬರಮಾಡಿಕೊಂಡರು. ಮಕ್ಕಳ ಮುಖದಲ್ಲಿದ್ದ ನಗು ಮತ್ತು ಉತ್ಸಾಹ ಶಾಲೆಯ ಆವರಣಕ್ಕೆ ಹೊಸ ಚೈತನ್ಯ ತುಂಬಿದಂತಿತ್ತು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯ ಶಿಕ್ಷಕಿ ಎಂ. ಶಾರದಮ್ಮ ವಹಿಸಿದ್ದರು. ಉದ್ಘಾಟನೆ ನೆರವೇರಿಸಿ ಮಾತನಾಡಿದ ಎಸ್‌ಡಿಎಂಸಿ ಅಧ್ಯಕ್ಷೆ ಸುಜಾತಾ ಕಮ್ಮಾರ, "ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕು. ಗ್ರಾಮೀಣ ಭಾಗದ ಮಕ್ಕಳ ಸರ್ವಾಂಗೀಣ ಬೆಳವಣಿಗೆಯಲ್ಲಿ ಸರ್ಕಾರಿ ಶಾಲೆಗಳು ಮಹತ್ವದ ಪಾತ್ರ ವಹಿಸುತ್ತಿವೆ" ಎಂದು ಹೇಳಿದರು.

ಪಾಲಕರು ತಮ್ಮ ಮಕ್ಕಳ ಶಿಕ್ಷಣದ ಬಗ್ಗೆ ಹೆಚ್ಚಿನ ಗಮನಹರಿಸಿ ಶಾಲೆಯೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು ಎಂದು ಅವರು ಸಲಹೆ ನೀಡಿದರು.

ದಾಖಲಾತಿ ಆಂದೋಲನದ ಅಂಗವಾಗಿ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಗ್ರಾಮದ ಪ್ರಮುಖ ಬೀದಿಗಳಲ್ಲಿ ಪ್ರಭಾತಫೇರಿ ನಡೆಸಿದರು. "ಪ್ರತಿಯೊಬ್ಬ ಮಗು ಶಾಲೆಗೆ – ಪ್ರತಿಯೊಂದು ಮನೆ ಶಿಕ್ಷಣದ ಬೆಳಕಿಗೆ", "ಶಿಕ್ಷಣವೇ ಜೀವನದ ನಿಜವಾದ ಸಂಪತ್ತು", "ಓದಿ ಬೆಳೆಯೋಣ – ದೇಶ ಕಟ್ಟೋಣ" ಎಂಬ ಘೋಷಣೆಗಳನ್ನು ಕೂಗುತ್ತ ಶಿಕ್ಷಣದ ಮಹತ್ವದ ಬಗ್ಗೆ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಿದರು.

> "ಪ್ರತಿಯೊಬ್ಬ ಮಗುವೂ ಶಾಲೆಯ ಬೆಳಕಿಗೆ ಬರಬೇಕು. ಶಿಕ್ಷಣವೇ ಮಕ್ಕಳ ಭವಿಷ್ಯ ರೂಪಿಸುವ ಶಕ್ತಿ. ಪಾಲಕರು ಮತ್ತು ಶಿಕ್ಷಕರು ಕೈಜೋಡಿಸಿದಾಗ ಮಾತ್ರ ಗ್ರಾಮೀಣ ಮಕ್ಕಳ ಬದುಕು ಪ್ರಕಾಶಮಾನವಾಗುತ್ತದೆ."
> – ಸುಜಾತಾ ಕಮ್ಮಾರ, ಎಸ್‌ಡಿಎಂಸಿ ಅಧ್ಯಕ್ಷೆ

ಗ್ರಾಮಸ್ಥರು ಕೂಡ ಮಕ್ಕಳ ದಾಖಲಾತಿ ಹೆಚ್ಚಿಸಲು ಸಹಕರಿಸುವುದಾಗಿ ಭರವಸೆ ನೀಡಿದರು.

ನಂತರ ನಡೆದ ಪಾಲಕ-ಪೋಷಕರ ಮಹಾಸಭೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ, ಹಾಜರಾತಿ, ಕಲಿಕಾ ಗುಣಮಟ್ಟ, ಶಿಸ್ತು, ಕ್ರೀಡೆ ಹಾಗೂ ಪಠ್ಯೇತರ ಚಟುವಟಿಕೆಗಳ ಕುರಿತು ಸವಿಸ್ತಾರ ಚರ್ಚೆ ನಡೆಯಿತು. ಶಾಲೆಯ ಅಭಿವೃದ್ಧಿ ಹಾಗೂ ಮಕ್ಕಳ ಭವಿಷ್ಯದ ಕುರಿತು ಪಾಲಕರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಶಿಕ್ಷಕರು ಮಕ್ಕಳ ನಿಯಮಿತ ಹಾಜರಾತಿ ಹಾಗೂ ಮನೆಯಲ್ಲಿ ಅಧ್ಯಯನದ ವಾತಾವರಣ ನಿರ್ಮಿಸುವ ಅಗತ್ಯವನ್ನು ಪಾಲಕರಿಗೆ ಮನವರಿಕೆ ಮಾಡಿಕೊಟ್ಟರು.

ಹೊಸ ಶೈಕ್ಷಣಿಕ ವರ್ಷದ ಅಂಗವಾಗಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು. ಬಳಿಕ ಮಧ್ಯಾಹ್ನದ ಬಿಸಿಯೂಟ ಯೋಜನೆಗೂ ಚಾಲನೆ ನೀಡಲಾಗಿದ್ದು, ವಿದ್ಯಾರ್ಥಿಗಳು ಒಟ್ಟಾಗಿ ಊಟ ಮಾಡುವ ಮೂಲಕ ಸಹಬಾಳ್ವೆಯ ಮೌಲ್ಯಗಳನ್ನು ಅರಿತುಕೊಂಡರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ವಿ. ವಿ. ಅಣ್ಣಿಗೇರಿ, ಆರ್. ಡಿ. ಬಡಿಗೇರ, ನೆಹರು ಮನೋಳಿ, ಗೌರಮ್ಮ, ಯು. ಎಸ್. ಕಣವಿ, ಎಸ್. ವಿ. ಗುಗ್ಗರಿ, ಎಸ್‌ಡಿಎಂಸಿ ಸದಸ್ಯರು, ಪಾಲಕ-ಪೋಷಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಒಟ್ಟಾರೆಯಾಗಿ ಶಿಕ್ಷಣದ ಹಬ್ಬದಂತಿದ್ದ ಈ ಕಾರ್ಯಕ್ರಮವು ಶಾಲೆ, ಪಾಲಕರು ಹಾಗೂ ಗ್ರಾಮಸ್ಥರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸಿದ್ದು, ಹೊಸ ಶೈಕ್ಷಣಿಕ ವರ್ಷಕ್ಕೆ ಆಶಾದಾಯಕ ಮತ್ತು ಅರ್ಥಪೂರ್ಣ ಚಾಲನೆ ನೀಡಿದಂತಾಯಿತು.

# ಜೂ.13ರಿಂದ ಗಾಣಿಗ ಸಮಾಜದ ಪ್ರತಿಭಾ ಪುರಸ್ಕಾರ- ವಧು-ವರರ ಸಮಾವೇಶ



■ ವಿಜಯಸಾಕ್ಷಿ ಸುದ್ದಿ, ರೋಣ

ಗಾಣಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಮಾಜದ ವಧು-ವರರ ಸಮಾವೇಶವನ್ನು ಜೂನ್ 13 ಮತ್ತು 14ರಂದು ಗದಗ ನಗರದ ಗಾಣಿಗ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ ಎಂದು ತಾಲೂಕು ಅಧ್ಯಕ್ಷ ಬಸವರಾಜ ನವಲಗುಂದ ತಿಳಿಸಿದರು.

ಭಾನುವಾರ ಪಿಡಬ್ಲ್ಯೂಡಿ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 13ರಂದು ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಜೂನ್ 14ರಂದು ಸಮಾಜದ ವಧು-ವರರ ಸಮಾವೇಶ ನಡೆಯಲಿದ್ದು, ಸಮಾಜದ ಬಂಧುಗಳು ಕುಟುಂಬ ಸಮೇತವಾಗಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಪ್ರತಿಭಾ ಪುರಸ್ಕಾರ ಹಾಗೂ ವಧು-ವರರ ಸಮಾವೇಶಕ್ಕೆ ಹೆಸರು ನೋಂದಾಯಿಸಿಕೊಳ್ಳಲು ಜೂನ್ 10 ಕೊನೆಯ ದಿನವಾಗಿರುತ್ತದೆ ಎಂದು ಮಾಹಿತಿ ನೀಡಿದರು.

ಯುವ ಘಟಕದ ಜಿಲ್ಲಾಧ್ಯಕ್ಷ ಅಭಿಷೇಕ ನವಲಗುಂದ ಮಾತನಾಡಿ, "ಗಾಣಿಗ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಮುಖ್ಯವಾಗಿ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ವೀಕ್ಷಿಸಿ ಗುಣಮಟ್ಟದ ಶಿಕ್ಷಣದತ್ತ ದಾಪುಗಾಲು ಹಾಕಬೇಕು. ಆಗ ಸಮಾಜದ ಕೀರ್ತಿ ಹೆಚ್ಚಲು ಸಾಧ್ಯವಾಗುತ್ತದೆ" ಎಂದು ಹೇಳಿದರು.

ಹೆಚ್ಚಿನ ಮಾಹಿತಿಗಾಗಿ ಹಾಗೂ ಹೆಸರು ನೋಂದಾಯಿಸಿಕೊಳ್ಳಲು 9900881184 ಹಾಗೂ 709078519 ಸಂಖ್ಯೆಗೆ ಸಂಪರ್ಕಿಸುವಂತೆ ಅವರು ಸೂಚಿಸಿದರು.

ಸುದ್ದಿಗೋಷ್ಠಿಯಲ್ಲಿ ಸಿದ್ದಣ್ಣ ನವಲಗುಂದ, ಮಲ್ಲಪ್ಪ ಆದಿ, ಅಚ್ಚಪ್ಪ ಅಚ್ಚನಗೌಡ್ರ, ಮಹಾಂತೇಶ ಗಾಣಿಗೇರ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಮಳೆ ಹಾನಿ ಪರಿಹಾರದಲ್ಲಿ ವಿಳಂಬ ಬೇಡ

▶▶ ಮೊದಲನೇ ಪುಟದಿಂದ

ಮಳೆಯಿಂದ ಮೃತಪಟ್ಟ 31 ಸಣ್ಣ ಸಾಕು ಪ್ರಾಣಿಗಳ ಮಾಲೀಕರಿಗೆ ₹1.52 ಲಕ್ಷ ಪರಿಹಾರ ನೀಡಲಾಗಿದೆ. ಜಿಲ್ಲೆಯಲ್ಲಿ 14 ಮನೆಗಳು ಭಾಗಶಃ ಹಾನಿಗೀಡಾಗಿದ್ದು ₹91 ಸಾವಿರ ಪರಿಹಾರ ವಿತರಿಸಲಾಗಿದೆ. 96 ಮನೆಗಳಿಗೆ ನೀರು ನುಗ್ಗಿದ ಹಿನ್ನೆಲೆಯಲ್ಲಿ ₹4.80 ಲಕ್ಷ ಪರಿಹಾರ ನೀಡಲಾಗಿದೆ.

ಮಳೆಯಿಂದ ಜಿಲ್ಲೆಯ ವಿವಿಧ ಭಾಗಗಳಲ್ಲಿ 907 ವಿದ್ಯುತ್ ಕಂಬಗಳು ಹಾಗೂ 10 ಶಾಲಾ ಕೊಠಡಿಗಳು ಹಾನಿಗೀಡಾಗಿದ್ದು, ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿ (ಓಆಖಈ) ಮಾನದಂಡಗಳ ಪ್ರಕಾರ ₹69.35 ಲಕ್ಷ ನಷ್ಟ ಅಂದಾಜಿಸಲಾಗಿದೆ.

ಜಿಲ್ಲೆಯ 92 ರೈತರಿಗೆ ಸೇರಿದ 34.58 ಎಕರೆ ತೋಟಗಾರಿಕೆ ಪ್ರದೇಶ ಹಾನಿಗೀಡಾಗಿದ್ದು, ₹6.70 ಲಕ್ಷ ನಷ್ಟ ಅಂದಾಜಿಸಲಾಗಿದೆ.

ಜಿಲ್ಲೆಯ ಕುಡಿಯುವ ನೀರಿನ ಸ್ಥಿತಿಗತಿ ಕುರಿತು ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ನವಿಲುತೀರ್ಥ ಜಲಾಶಯದಲ್ಲಿ 5.905 ಟಿಎಂಸಿ, ಭದ್ರಾ ಜಲಾಶಯದಲ್ಲಿ 16.497 ಟಿಎಂಸಿ ಹಾಗೂ ಹಮ್ಮಿಗಿ ಬ್ಯಾರೇಜ್‌ನಲ್ಲಿ 1.978 ಟಿಎಂಸಿ ನೀರು ಸಂಗ್ರಹವಿದ್ದು, ಮುಂದಿನ 90 ದಿನಗಳವರೆಗೆ ಕುಡಿಯುವ ನೀರು ಪೂರೈಸಲು ಸಾಧ್ಯವಿದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಕೆ.ಆರ್. ದುರಗೇಶ್, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಡಿಡಿಪಿಐ ಆರ್.ಎಸ್. ಬುರಡಿ, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣನವರ, ಪೌರಾಯುಕ್ತ ರಾಜಾರಾಮ್ ಪವಾರ, ಕಾರ್ಮಿಕ ಇಲಾಖೆ ಜಿಲ್ಲಾ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## 13 ಲಕ್ಷಕ್ಕೂ ಹೆಚ್ಚು ಮೌಲ್ಯದ ಚಿನ್ನ-ಮೊಬೈಲ್ ರಿಕವರಿ

■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

ಜಿಲ್ಲೆಯ ಮಹಾಲಿಂಗಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಒಟ್ಟು 13.34 ಲಕ್ಷ ರೂ. ಮೌಲ್ಯದ ಕಳುವಾದ ಚಿನ್ನಾಭರಣ ಹಾಗೂ ಮೊಬೈಲ್‌ಗಳನ್ನು ಪತ್ತೆ ಹಚ್ಚಿದ್ದಾರೆ.

### ಕೃತಕ ಅಭಾವ ಸೃಷ್ಟಿಸಬೇಡಿ- ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬೇಡಿ ಎಂದು ಡಿಸಿ ಸಿ.ಎನ್. ಶ್ರೀಧರ ಎಚ್ಚರಿಕೆ

# ಪೆಟ್ರೋಲ್ ಬಂಕ್‌ಗಳ ಆಟಕ್ಕೆ ಡಿಸಿ ಗರಂ!

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಪೂರೈಕೆಯಲ್ಲಿ ಉಂಟಾಗುತ್ತಿರುವ ವ್ಯತ್ಯಯವನ್ನು ಸಂಬಂಧಪಟ್ಟವರು ಸಮರ್ಪಕವಾಗಿ ನಿರ್ವಹಿಸಬೇಕು. ಸಾರ್ವಜನಿಕರು ವದಂತಿಗಳಿಗೆ ಕಿವಿಗೊಟ್ಟು ಆತಂಕದಿಂದ ಇಂಧನ ಸಂಗ್ರಹಿಸುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಜಿಲ್ಲಾಡಳಿತ ಭವನದ ಕೋರ್ಟ್ ಹಾಲ್‌ನಲ್ಲಿ ಬುಧವಾರ ನಡೆದ ಪೆಟ್ರೋಲ್ ಬಂಕ್ ಮಾಲೀಕರು, ತೈಲ ಕಂಪನಿಗಳ ಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಇಂಧನ ಕೊರತೆ ಕುರಿತು ಸಾರ್ವಜನಿಕರಲ್ಲಿ ಗೊಂದಲ ಉಂಟಾಗಿರುವುದು ಹಾಗೂ ಕೆಲವು ಬಂಕ್‌ಗಳಲ್ಲಿ ಜನದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಭೆ ಕರೆಯಲಾಗಿತ್ತು.

ತೈಲ ಕಂಪನಿಗಳು ಸಮಯಕ್ಕೆ ಸರಿಯಾಗಿ ಇಂಧನ ಪೂರೈಕೆ ಮಾಡಬೇಕು. ಸಾಕಷ್ಟು ದಾಸ್ತಾನು ಇದ್ದರೂ ಸಾರ್ವಜನಿಕರಿಗೆ ಇಂಧನ ನೀಡದೆ ಬಂಕ್ ಮುಚ್ಚುವುದು ಅಥವಾ "ಇಂಧನ ಲಭ್ಯವಿಲ್ಲ" ಎಂಬ ಫಲಕ ಹಾಕಿ ಕೃತಕ ಅಭಾವ ಸೃಷ್ಟಿಸುವುದನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಖಡಕ್ ಎಚ್ಚರಿಕೆ ನೀಡಿದರು.

ಇಲಾಖೆಯ ಆಟೋಮೇಷನ್ ವ್ಯವಸ್ಥೆಯ ಮೂಲಕ ಬಂಕ್‌ಗಳ ದಾಸ್ತಾನು ಸ್ಥಿತಿಯನ್ನು ಆನ್‌ಲೈನ್‌ನಲ್ಲೇ ಪರಿಶೀಲಿಸಲು ಅವಕಾಶವಿದ್ದು, ನಿಯಮ ಉಲ್ಲಂಘಿಸುವ ಡೀಲರ್‌ಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾಡಳಿತ ಪೆಟ್ರೋಲ್ ಬಂಕ್‌ಗಳಿಗೆ ಅಗತ್ಯ ಸಹಕಾರ ನೀಡಲು ಸಿದ್ಧವಿದ್ದು, ಬಂಕ್ ಮಾಲೀಕರು ಸರ್ಕಾರದೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಇಂಧನ ವಿತರಣೆಯನ್ನು ನಿರ್ವಹಿಸಬೇಕು ಎಂದು ಸೂಚಿಸಿದರು.

ಇಂಧನ ಕೊರತೆಯಂತಹ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವುದು ಎಲ್ಲರ ಜವಾಬ್ದಾರಿಯಾಗಿದ್ದು, ಇಂಡೆಂಟ್ ಆಧಾರದ ಮೇಲೆ ಆದ್ಯತೆಯ ಕ್ರಮದಲ್ಲಿ ಇಂಧನ ಪೂರೈಕೆ ಆಗಬೇಕು. ಎಲ್ಲರಿಗೂ ಸಮಾನ ಅವಕಾಶ ದೊರೆಯುವಂತೆ ವಿತರಣಾ ವ್ಯವಸ್ಥೆ ಇರಬೇಕು ಎಂದು ಹೇಳಿದರು.

ದೈನಂದಿನ ವಾಹನ ಸವಾರರಿಗೆ ಎಂದಿನಂತೆ ಯಾವುದೇ ಅಡೆತಡೆಯಿಲ್ಲದೆ ಇಂಧನ ಪೂರೈಸಬೇಕು. ಬಂಕ್‌ಗಳಲ್ಲಿ ಜನಸಂದಣಿ ಹೆಚ್ಚಾದ ಸಂದರ್ಭದಲ್ಲೂ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಡಿಸಿ ಸೂಚಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಪೆಟ್ರೋಲ್ ಬಂಕ್ ಮಾಲೀಕರು ಮತ್ತು ಪ್ರತಿನಿಧಿಗಳು ಹುಬ್ಬಳ್ಳಿಯಿಂದ ಬರುವ ಇಂಧನ ಟ್ಯಾಂಕರ್‌ಗಳಿಗೆ ಸಂಚಾರ ದಟ್ಟಣೆಯಿಂದ ಉಂಟಾಗುತ್ತಿರುವ ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಸಭೆಯಲ್ಲಿ ಆಹಾರ ಇಲಾಖೆ ಉಪನಿರ್ದೇಶಕರು, ತೈಲ ಕಂಪನಿಗಳ ಸೇಲ್ಸ್ ಅಧಿಕಾರಿಗಳು, ಪೆಟ್ರೋಲ್ ಬಂಕ್ ಮಾಲೀಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



> "ಸಾಕಷ್ಟು ಇಂಧನ ದಾಸ್ತಾನು ಇದ್ದರೂ ಕೃತಕ ಅಭಾವ ಸೃಷ್ಟಿಸಿ ಸಾರ್ವಜನಿಕರಲ್ಲಿ ಆತಂಕ ಮೂಡಿಸಿದರೆ ಸಂಬಂಧಪಟ್ಟವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

**ಕ್ಯಾನ್‌ನಲಿ ಡೀಸೆಲ್ ಮಾರಾಟಕ್ಕೆ ಬ್ರೇಕ್!**

ಅನುಮತಿಯಿಲ್ಲದೆ ಕ್ಯಾನ್ ಹಾಗೂ ಬ್ಯಾರೆಲ್‌ಗಳಲ್ಲಿ ಇಂಧನ ಮಾರಾಟ ಮಾಡುವುದನ್ನು ಜಿಲ್ಲಾಡಳಿತ ಕಟ್ಟುನಿಟ್ಟಾಗಿ ನಿಷೇಧಿಸಿದೆ. ಆಸ್ಪತ್ರೆಗಳು, ಎಟಿಎಂ ಕೇಂದ್ರಗಳು, ಮೊಬೈಲ್ ಟವರ್‌ಗಳು ಹಾಗೂ ಅಗತ್ಯ ಸೇವೆಗಳ ಜನರೇಟರ್‌ಗಳಿಗೆ ಮಾತ್ರ ಸಂಬಂಧಪಟ್ಟ ತಹಸೀಲ್ದಾರ್ ಅಥವಾ ಜಿಲ್ಲಾಡಳಿತದ ಅನುಮತಿ ಪಡೆದು ಡೀಸೆಲ್ ವಿತರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸ್ಪಷ್ಟಪಡಿಸಿದರು.

### ಉತ್ತರ ಕರ್ನಾಟಕಕ್ಕೆ ಪ್ರಾತಿನಿಧ್ಯ ಕಲ್ಪಿಸಲು ಹಾಲಮತ ಸಮಾಜದ ಆಗ್ರಹ

# ಬಸವರಾಜ ಶಿವಣ್ಣನವರಿಗೆ ಸಚಿವ ಸ್ಥಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕ ಬಸವರಾಜ ಶಿವಣ್ಣನವರ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ಹಾಲಮತ ಸಮಾಜದ ವತಿಯಿಂದ ಸೋಮವಾರ ಪತ್ರಿಕಾಗೋಷ್ಠಿ ನಡೆಸಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಹಾಲಮತ ಸಮಾಜದ ಮುಖಂಡ ಹಾಗೂ ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ನಿರ್ದೇಶಕ ಸೋಮಣ್ಣ ಬೆಟಗೇರಿ, "ಉತ್ತರ ಕರ್ನಾಟಕ ಭಾಗದ ರೈತರು, ಬಡವರು ಹಾಗೂ ಅಹಿಂದ ವರ್ಗದವರ ಸಮಸ್ಯೆಗಳಿಗೆ ಸ್ಪಂದಿಸುವ ಸಚಿವರ ಅಗತ್ಯವಿದೆ. ಆ ನಿಟ್ಟಿನಲ್ಲಿ ಬಸವರಾಜ ಶಿವಣ್ಣನವರ ಅವರು ಸೂಕ್ತ ಅಭ್ಯರ್ಥಿಯಾಗಿದ್ದಾರೆ" ಎಂದು ಹೇಳಿದರು.

ನಾಲ್ಕು ಬಾರಿ ಶಾಸಕರಾಗಿ ಅಪಾರ ಜನಪ್ರಿಯತೆ ಗಳಿಸಿರುವ ಅವರು ಪಕ್ಷ ಹಾಗೂ ಸರ್ಕಾರದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಜನಸಾಮಾನ್ಯರೊಂದಿಗೆ ಆತ್ಮೀಯವಾಗಿ ಬೆರೆಯುವ ನಾಯಕರಾಗಿರುವ ಶಿವಣ್ಣನವರ ಅವರಿಗೆ ಸಚಿವ ಸ್ಥಾನ ನೀಡಿದರೆ ಉತ್ತರ ಕರ್ನಾಟಕ ಭಾಗಕ್ಕೆ ಸೂಕ್ತ ಪ್ರಾತಿನಿಧ್ಯ ದೊರೆಯುವುದರ ಜೊತೆಗೆ ಅಹಿಂದ ವರ್ಗ ಮತ್ತಷ್ಟು ಬಲಿಷ್ಠವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಹಾಗೂ ಸಾಮಾಜಿಕ ನ್ಯಾಯದ ಆಶಯಗಳನ್ನು ಸಾಕಾರಗೊಳಿಸುವಲ್ಲಿ ಶಿವಣ್ಣನವರ ಅವರ ಪಾತ್ರ ಮಹತ್ವದ್ದಾಗಿದೆ. ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಪಕ್ಷಕ್ಕೂ ಲಾಭವಾಗಲಿದ್ದು, ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡಲಿದೆ ಎಂದು ಹೇಳಿದರು.

ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಭಾವಿ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ ಅವರ ನೇತೃತ್ವದ ಸಚಿವ ಸಂಪುಟದಲ್ಲಿ ಬಸವರಾಜ ಶಿವಣ್ಣನವರಿಗೆ ಸಚಿವ ಸ್ಥಾನ ನೀಡುವ ಮೂಲಕ ಉತ್ತರ ಕರ್ನಾಟಕದ ಜನರ ಆಶಯ ಈಡೇರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಹುಲ್ ಹೊಳಲಾಪುರ, ಮುದಕಣ್ಣ ಗದ್ದಿ, ಛಾಯಪ್ಪ ಬಸಾಪುರ, ಮುತ್ತಣ್ಣ ಟೋಕಾಳಿ, ಮಂಜುನಾಥ ಶೇರಸೂರಿ, ಸುರೇಶ ಹೊಳಲಾಪುರ, ಮಲ್ಲೇಶಪ್ಪ ಬಸಾಪುರ ಹಾಗೂ ಪುಟ್ಟಪ್ಪ ಬಳಗಾನೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.




### ಶಿಗ್ಲಿಯಲ್ಲಿ ಭಕ್ತರ ಮನೆಬೇಟಿ ನಡೆಸಿದ ಶ್ರೀಕ್ಷೇತ್ರ ಕೊಟ್ಟೂರಿನ ಶಿವಪ್ರಕಾಶ ಸ್ವಾಮೀಜಿ

# ಮಾನವತ್ವವೇ ಬದುಕಿನ ನಿಜವಾದ ಆಭರಣ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದಲ್ಲಿ ಅಧಿಕಮಾಸದ ಪ್ರಯುಕ್ತ ಶ್ರೀ-ಕ್ಷೇತ್ರ ಕೊಟ್ಟೂರಿನ ಶಿವಪ್ರಕಾಶ ಸ್ವಾಮೀಜಿ ಭಕ್ತರ ಮನೆಬೇಟಿ ನೀಡಿ ಪೂಜೆ ಹಾಗೂ ಆಶೀರ್ವಾದ ಕೈಂಕರ್ಯ ನೆರವೇರಿಸಿದರು.

ಗ್ರಾಮದ ಧರ್ಮಾಭಿಮಾನಿ ಹಾಗೂ ಚಿಂತಕ ವೀರಣ್ಣ ಹಾಲಪ್ಪ ಪವಾಡದ ಅವರ ಮನೆಯಲ್ಲಿ ಆಶೀರ್ವಚನ ನೀಡಿದ ಸ್ವಾಮೀಜಿ, "ಚಿನ್ನ, ಬೆಳ್ಳಿ, ಉಡುಗೆ-ತೊಡುಗೆಗಳು ಬಹಿರಂಗದ ಅಲಂಕಾರಗಳು ಮಾತ್ರ. ಆದರೆ ದಾನ, ಧರ್ಮ, ದಯೆ, ಕರುಣೆ, ವಾತ್ಸಲ್ಯ ಹಾಗೂ ಮಾನವೀಯ ಗುಣಗಳು ಅಂತರಂಗದ ನಿಜವಾದ ಅಲಂಕಾರಗಳು" ಎಂದು ಹೇಳಿದರು.

"ದೈವೀ ಗುಣಗಳು ಬದು-ಕಿಗೆ ಅಲೌಕಿಕ ಮೌಲ್ಯ ತರುತ್ತವೆ. ಅವುಗಳಿಲ್ಲದಿದ್ದರೆ ಧನ, ಸ್ಥಾನಮಾನ, ವಿದ್ಯೆ ಎಲ್ಲವೂ ನಿಷ್ಪ್ರಯೋಜಕ. ಮನುಷ್ಯನ ಕೈ, ಮನಸ್ಸು ಹಾಗೂ ಮತಿ ಎಲ್ಲವೂ ದುಡಿಯಬೇಕು. ಮಾನವತ್ವದಿಂದ ದೈವತ್ವಕ್ಕೆ ಏರುವುದು ದುಡಿಮೆಯಿಂದಲೇ ಸಾಧ್ಯ" ಎಂದು ಸ್ವಾಮಿ ವಿವೇಕಾನಂದರ ಉಲ್ಲೇಖದೊಂದಿಗೆ ತಿಳಿಸಿದರು.

"ಕಷ್ಟದ ಬೆಟ್ಟವನ್ನು ಏರಿ ಇಳಿದಾಗಲೇ ಸುಖದ ಸಾಗರ ತಲುಪಲು ಸಾಧ್ಯ" ಎಂದು ಸ್ವಾಮೀಜಿ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಭಕ್ತರಾದ ನಿರ್ಮಲಾದೇವಿ ಪವಾಡದ, ರಮೇಶ ಬಸವಂತಪ್ಪ ಅಣ್ಣಿಗೇರಿ, ಜಗದೀಶ ಹಿರೇಮಠ, ರಾಮು ಗೋಕರ, ಲಾವಣ್ಯ, ಅನ್ನದಾನೇಶ್ವರ, ಲಕ್ಷ್ಮೀ ವೀರಸೋಮೇಶ್ವರ, ಶಿವಯೋಗರಾಜ, ವಿಜಯ ವೀಣಾ, ನಮ್ರತಾ, ನಂದೀಶ್ವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



### ಆಕಸ್ಮಿಕ ನಿಧನ ಹೊಂದಿದ ಸದಸ್ಯರ ಕುಟುಂಬಕ್ಕೆ ₹1ಲಕ್ಷ ನೆರವು

# ಛಾಯಾಗ್ರಾಹಕರಿಗೆ ಕೆಪಿಎ 'ಆಸರೆ'



■ ವಿಜಯಸಾಕ್ಷಿ ಸುದ್ದಿ, ಗದಗ

ಛಾಯಾಗ್ರಾಹಕರ ಸಾಮಾಜಿಕ ಭದ್ರತೆಗೆ ಮಹತ್ವದ ಹೆಜ್ಜೆಯಾಗಿ ಕರ್ನಾಟಕ ಛಾಯಾಚಿತ್ರ ಗ್ರಾಹಕರ ಸಂಘ (ಕೆಪಿಎ) "ಆಸರೆ ಯೋಜನೆ"ಯನ್ನು ಜಾರಿಗೆ ತಂದಿದ್ದು, ನೋಂದಾಯಿತ ಛಾಯಾಗ್ರಾಹಕ ಆಕಸ್ಮಿಕವಾಗಿ ನಿಧನರಾದಲ್ಲಿ ಅವರ ಕುಟುಂಬಕ್ಕೆ ₹1 ಲಕ್ಷ ಆರ್ಥಿಕ ನೆರವು ನೀಡುವ ಘೋಷಣೆ ಮಾಡಲಾಗಿದೆ.

ನಗರದ ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಮಠದಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಕೆಪಿಎ ಆಸರೆ ಯೋಜನೆಯ ಪೋಸ್ಟರ್‌ಗಳನ್ನು ಅನಾವರಣಗೊಳಿಸಿ ಯೋಜನೆಗೆ ಅಧಿಕೃತ ಚಾಲನೆ ನೀಡಲಾಯಿತು. ಗದಗ ಜಿಲ್ಲಾ ಛಾಯಾಗ್ರಾಹಕರ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಅನೇಕ ಛಾಯಾಗ್ರಾಹಕರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ಜಿಲ್ಲಾಧ್ಯಕ್ಷ ಪವನ್ ಕೆ. ಮೆಹರ್‌ವಾಡೆ, ಮುಖ್ಯ ಕಾರ್ಯದರ್ಶಿ ಮಹದೇವಗೌಡ ಸಂಕನಗೌಡ್ರು, ಹಾಗೂ ಕರ್ನಾಟಕ ಛಾಯಾಚಿತ್ರ ಗ್ರಾಹಕರ ಸಂಘ ಬೆಂಗಳೂರು (ಕೆಪಿಎ) ನೂತನ ನಿರ್ದೇಶಕ ಮಂಜುನಾಥ ಎಸ್. ಲಕ್ಷಟ್ಟಿ ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಮಹದೇವಗೌಡ ಸಂಕನಗೌಡ್ರು, "ರಾಜ್ಯದಲ್ಲಿಯೇ ಮೊದಲ ಬಾರಿಗೆ ಛಾಯಾಗ್ರಾಹಕರಿಗಾಗಿ ಇಂತಹ ಆಸರೆ ಯೋಜನೆ ಜಾರಿಗೆ ತರಲಾಗಿದೆ. ಸ್ವಾಭಾವಿಕ ಮರಣ, ಅಪಘಾತ ಅಥವಾ ಅನಾರೋಗ್ಯದಿಂದ ಛಾಯಾಗ್ರಾಹಕ ಮೃತಪಟ್ಟರೆ ಅವರ ಕುಟುಂಬಕ್ಕೆ ನೆರವಾಗುವ ಉದ್ದೇಶದಿಂದ ಯೋಜನೆ ರೂಪಿಸಲಾಗಿದೆ. ಎಲ್ಲ ಛಾಯಾಗ್ರಾಹಕರು ಜಾಗೃತರಾಗಿ ಯೋಜನೆಗೆ ನೋಂದಣಿ ಮಾಡಿಸಿಕೊಳ್ಳಬೇಕು," ಎಂದು ಮನವಿ ಮಾಡಿದರು.

ಕೆಪಿಎ ನಿರ್ದೇಶಕ ಮಂಜುನಾಥ ಎಸ್. ಲಕ್ಷಟ್ಟಿ ಮಾತನಾಡಿ, "ಜೂನ್ 1ರಿಂದ ರಾಜ್ಯಾದ್ಯಂತ ಯೋಜನೆ ನೋಂದಣಿ ಆರಂಭಗೊಂಡಿದೆ. ನೋಂದಾಯಿತ ಸದಸ್ಯರು ಆಕಸ್ಮಿಕವಾಗಿ ನಿಧನರಾದಲ್ಲಿ ಅವರ ಕುಟುಂಬಕ್ಕೆ ₹1 ಲಕ್ಷ ನೆರವು ನೀಡಲಾಗುವುದು. ಗದಗ ಜಿಲ್ಲೆಯ ಛಾಯಾಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯ ಸದುಪಯೋಗ ಪಡೆಯಬೇಕು," ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಹಾಗೂ ತಾಲೂಕಿನ ಸಮಸ್ತ ಛಾಯಾಗ್ರಾಹಕರು ಉಪಸ್ಥಿತರಿದ್ದರು.

### 115ಕ್ಕೆ 115 ವಿದ್ಯಾರ್ಥಿಗಳು ಪಾಸ್ – ಸಿದ್ದಲಿಂಗನಗರ ಶಾಲೆ ಇತಿಹಾಸ ನಿರ್ಮಾಣ

# ಸರ್ಕಾರಿ ಶಾಲೆಯ ಸೂಪರ್ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಸಿದ್ದಲಿಂಗನಗರ ಸರ್ಕಾರಿ ಪ್ರೌಢಶಾಲೆ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ದಾಖಲಿಸುವ ಮೂಲಕ ಐತಿಹಾಸಿಕ ಸಾಧನೆ ಮಾಡಿದೆ. 33 ವರ್ಷಗಳ ಹಿಂದೆ ಆರಂಭವಾದ ಈ ಶಾಲೆ ತನ್ನ ಶೈಕ್ಷಣಿಕ ಇತಿಹಾಸದಲ್ಲೇ ಮೊದಲ ಬಾರಿಗೆ ಶತಪ್ರತಿಶತ ಫಲಿತಾಂಶ ದಾಖಲಿಸಿ ಹೊಸ ಮೈಲಿಗಲ್ಲು ನಿರ್ಮಿಸಿದೆ.

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ಮೂರು ವರ್ಷಗಳ ಹಿಂದೆ ಶಾಲೆಯನ್ನು ದತ್ತು ಪಡೆದು ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದ್ದರು. ಅವರ ಸಹಕಾರದಿಂದ ಶಾಲೆ ಜಿಲ್ಲೆಯಲ್ಲಿ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿ ಬೆಳೆದಿದ್ದು, ಇಂದು ಇಲ್ಲಿ ಐದು ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಪ್ರವೇಶಕ್ಕಾಗಿ ಸಾಕಷ್ಟು ಬೇಡಿಕೆಯೂ ಇದೆ.

ಶಾಲೆಯಲ್ಲಿ ಕೇವಲ ಮೂಲಭೂತ ಸೌಕರ್ಯಗಳಷ್ಟೇ ಅಲ್ಲದೆ, ಗುಣಮಟ್ಟದ ಶಿಕ್ಷಣಕ್ಕೂ ಹೆಚ್ಚಿನ ಆದ್ಯತೆ ನೀಡಿದ್ದರಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಶಾಲಾ ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ ಅಭಿಪ್ರಾಯಪಟ್ಟರು. "ನಮ್ಮ ಶ್ರಮ ಸಾರ್ಥಕವಾಗಿದೆ" ಎಂದು ಅವರು ಭಾವುಕರಾಗಿ ಹೇಳಿದರು.

ಪರೀಕ್ಷೆಗೆ ಹಾಜರಾದ 115 ವಿದ್ಯಾರ್ಥಿಗಳ ಪೈಕಿ ಒಬ್ಬ ವಿದ್ಯಾರ್ಥಿನಿ ಆರಂಭದಲ್ಲಿ ಅನುತ್ತೀರ್ಣಳಾಗಿದ್ದರಿಂದ ಶೇ.100 ಫಲಿತಾಂಶ ಕೈ ತಪ್ಪಿತ್ತು. ಆದರೆ ಮರುಪರೀಕ್ಷೆಯಲ್ಲಿ ಆ ವಿದ್ಯಾರ್ಥಿನಿಯೂ ಉತ್ತೀರ್ಣಳಾಗುವ ಮೂಲಕ ಎಲ್ಲಾ 115 ವಿದ್ಯಾರ್ಥಿಗಳು ಪಾಸಾಗಿ ಶಾಲೆ ಶತಪ್ರತಿಶತ ಫಲಿತಾಂಶ ದಾಖಲಿಸಿದೆ.

ಈ ದಾಖಲೆ ಸಾಧನೆಗೆ ಶಿಕ್ಷಕರ ಪರಿಶ್ರಮ, ಪಾಲಕರ ಸಹಕಾರ ಹಾಗೂ ವಿದ್ಯಾರ್ಥಿಗಳ ಕಲಿಕೆಯ ಆಸಕ್ತಿ ಮುಖ್ಯ ಕಾರಣವಾಗಿದೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

ಶಾಲೆಯ ಈ ಸಾಧನೆಗೆ ಸಭಾಪತಿ ಬಸವರಾಜ ಹೊರಟ್ಟಿ, ಶಾಲಾ ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ, ಡಿಡಿಪಿಐ ಆರ್. ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟಪ್ಪನವರ್, ಶಾಲಾ ನೋಡಲ್ ಅಧಿಕಾರಿ ಶಂಕರ್ ಹಡಗಲಿ, ಎಸ್‌ಡಿಎಂಸಿ ಅಧ್ಯಕ್ಷೆ ಶ್ರೀಮತಿ ನಂದಾ ಕಟವಟೆ, ಮುಖ್ಯೋಪಾಧ್ಯಾಯ ಎಚ್. ವೈ. ತಕ್ಕಲಕೋಟಿ, ಹಿಂದಿನ ಪ್ರಭಾರಿ ಮುಖ್ಯೋಪಾಧ್ಯಾಯೆ ಶ್ರೀಮತಿ ಜಯಲಕ್ಷ್ಮಿ ಅಣ್ಣಿಗೇರಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಎಸ್‌ಡಿಎಂಸಿ ಸದಸ್ಯರು, ಶಿಕ್ಷಣ ಪ್ರೇಮಿಗಳು ಹಾಗೂ ಶಾಲಾ ಹಿತೈಷಿಗಳು ಶಿಕ್ಷಕ ವೃಂದ ಮತ್ತು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.




**ದತ್ತು ಪಡೆದ ಶಾಲೆ ಇಂದು ಜಿಲ್ಲೆಯ ಮಾದರಿ ಶಾಲೆ..!**

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ಮೂರು ವರ್ಷಗಳ ಹಿಂದೆ ಶಾಲೆಯನ್ನು ದತ್ತು ಪಡೆದ ಬಳಿಕ ಶಾಲೆಯ ಚಿತ್ರಣವೇ ಬದಲಾಗಿದೆ. ಗುಣಮಟ್ಟದ ಶಿಕ್ಷಣ, ಮೂಲಭೂತ ಸೌಲಭ್ಯ ಹಾಗೂ ಶಿಕ್ಷಕರ ಪರಿಶ್ರಮದಿಂದ ಇಂದು ಶಾಲೆಯಲ್ಲಿ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಪ್ರವೇಶಕ್ಕಾಗಿ ಪೈಪೋಟಿ ನಿರ್ಮಾಣವಾಗಿದೆ.

## ಡಿಕೆ ಸಿಎಂ: ಶಿರಹಟ್ಟಿಯಲ್ಲಿ ವಿಜಯೋತ್ಸವ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಡಿ.ಕೆ. ಶಿವಕುಮಾರ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಶಿರಹಟ್ಟಿಯಲ್ಲಿ ಅವರ ಅಭಿಮಾನಿಗಳು ಸಂಭ್ರಮಾಚರಣೆ ನಡೆಸಿದರು.

ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ಪಟಾಕಿ ಸಿಡಿಸಿ, ಕೇಕ್ ಕತ್ತರಿಸುವ ಮೂಲಕ ವಿಜಯೋತ್ಸವ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ಕಾರ್ಯಾಧ್ಯಕ್ಷ ಮಹಾಂತೇಶ ದಶಮನಿ, "ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿರುವ ಡಿ.ಕೆ. ಶಿವಕುಮಾರ ಮುಖ್ಯಮಂತ್ರಿ ಆಗಿರುವುದು ಅಭಿಮಾನಿಗಳಿಗೆ ಸಂತಸ ತಂದಿದೆ. ಅವರ ಆಡಳಿತದಲ್ಲಿ ರಾಜ್ಯ ಅಭಿವೃದ್ಧಿ ಪಥದಲ್ಲಿ ಸಾಗಲಿದೆ" ಎಂದು ಹೇಳಿದರು.

ಅಶ್ರತಅಲಿ ಢಾಲಾಯತ, ಬಸವರಾಜ ಕಂಬಳಿ, ಈರಣ್ಣ ಕೋಟಿ, ಮಾಬುಸಾಬ ಟಪಾಲ, ಶೌಕತಅಲಿ ಮನಿಯಾರ, ಸಮದ ಢಾಲಾಯತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಡೆಂಗ್ಯೂ-ಮಲೇರಿಯಾ ತಡೆಗೆ ಗ್ರಾಮಗಳಲ್ಲಿ ವಿಶೇಷ ಸ್ವಚ್ಛತಾ ಅಭಿಯಾನ ನಡೆಸಿ: ಚಂದ್ರಶೇಖರ ಬಿ. ಕಂದಕೂರ**

# ಮಳೆಗಾಲದಲ್ಲಿ ಸ್ವಚ್ಛತೆ ನಿರ್ಲಕ್ಷ್ಯ ಬೇಡ!

■ ವಿಜಯಸಾಕ್ಷಿ ಸುದ್ದಿ, ರೋಣ

ಮಳೆಗಾಲದ ಸಂದರ್ಭದಲ್ಲಿ ಗ್ರಾಮಗಳಲ್ಲಿ ಸ್ವಚ್ಛತೆ ಕಾಪಾಡುವುದು ಹಾಗೂ ಸಾರ್ವಜನಿಕ ಆರೋಗ್ಯ ರಕ್ಷಣೆ ಅತ್ಯಂತ ಮಹತ್ವದ್ದಾಗಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತಾ ಕಾರ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು ಎಂದು ರೋಣ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಹೊಳೆಆಲೂರು ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಚಂದ್ರಶೇಖರ ಬಿ. ಕಂದಕೂರ ಹೇಳಿದರು.

ಹೊಳೆಆಲೂರು ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಮಳೆಗಾಲದಲ್ಲಿ ಚರಂಡಿಗಳಲ್ಲಿ ನೀರು ನಿಲ್ಲುವುದು, ಕಸ ಸಂಗ್ರಹವಾಗುವುದು ಹಾಗೂ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಗ್ರಾಮಗಳಲ್ಲಿ ನಿರಂತರ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಗ್ರಾಮದ ಮುಖ್ಯ ರಸ್ತೆ, ಬೀದಿಗಳು, ಚರಂಡಿಗಳು, ಸಾರ್ವಜನಿಕ ಸ್ಥಳಗಳು ಹಾಗೂ ಕುಡಿಯುವ ನೀರಿನ ಮೂಲಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡುವ ಮೂಲಕ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳ ಹರಡುವಿಕೆಯನ್ನು ತಡೆಯಬಹುದು ಎಂದು ಹೇಳಿದರು. ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಸ್ವಚ್ಛತಾಗಾರರು ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಸ್ವಚ್ಛ ಮತ್ತು ಆರೋಗ್ಯಕರ ಗ್ರಾಮ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.



ಸ್ವಚ್ಛತಾಗಾರರ ಸುರಕ್ಷತೆಯ ಬಗ್ಗೆ ವಿಶೇಷ ಒತ್ತು ನೀಡಿದ ಅವರು, ಸ್ವಚ್ಛತಾ ಕಾರ್ಯಗಳಲ್ಲಿ ತೊಡಗುವ ಸಿಬ್ಬಂದಿ ಕಡ್ಡಾಯವಾಗಿ ಗ್ಲೌಸ್, ಬೂಟು, ಮಾಸ್ಕ್ ಹಾಗೂ ಸುರಕ್ಷತಾ ಜಾಕೆಟ್ ಧರಿಸಿ ಕರ್ತವ್ಯ ನಿರ್ವಹಿಸಬೇಕು. ಸುರಕ್ಷತಾ ಕ್ರಮ ಪಾಲಿಸುವುದರಿಂದ ಸೋಂಕು ಹಾಗೂ ಅಪಘಾತಗಳಿಂದ ರಕ್ಷಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆ, ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ, ಕಸ ವಿಂಗಡಣೆ, ಚರಂಡಿಗಳ ನಿರ್ವಹಣೆ ಹಾಗೂ ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಿತು.

> "ಗ್ರಾಮದ ರಸ್ತೆ, ಚರಂಡಿ, ಸಾರ್ವಜನಿಕ ಸ್ಥಳಗಳು ಹಾಗೂ ಕುಡಿಯುವ ನೀರಿನ ಮೂಲಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿದರೆ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳ ಹರಡುವಿಕೆಯನ್ನು ಪರಿಣಾಮಕಾರಿಯಾಗಿ ತಡೆಯಬಹುದು."
>
> **–ಚಂದ್ರಶೇಖರ ಬಿ. ಕಂದಕೂರ,** ಸಿಇಒ–ರೋಣ

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ ಗಿರಿತಮ್ಮನ್ನವರ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಗೂ ಸ್ವಚ್ಛತಾಗಾರರಿಗೆ ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು. ಗ್ರಾಮದಲ್ಲಿ ನಿಯಮಿತ ಸ್ವಚ್ಛತಾ ಕಾರ್ಯ ನಡೆಸುವುದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಮಳೆಗಾಲದಲ್ಲಿ ವಿಶೇಷ ಸ್ವಚ್ಛತಾ ಅಭಿಯಾನಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಿದರು. ಸಭೆಯಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು, ಸ್ವಚ್ಛತಾಗಾರರು ಹಾಗೂ ಸಾರ್ವಜನಿಕರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

# 'ಕ್ಷಮೆಯಿರಲಿ ತಂದೆ' ಜೂ. 12ಕ್ಕೆ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಂಗಭೂಮಿ, ಕಿರುತೆರೆ ಹಾಗೂ ಹಿರಿತೆರೆಯಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ಸಕ್ರಿಯರಾಗಿರುವ ಹಿರಿಯ ಹಾಸ್ಯನಟ ಮೂಗು ಸುರೇಶ್ ಇದೀಗ ನಿರ್ಮಾಪಕ ಹಾಗೂ ನಿರ್ದೇಶಕರಾಗಿ ರೂಪಿಸಿರುವ ಕ್ಷಮೆಯಿರಲಿ ತಂದೆ ಚಿತ್ರ ಜೂನ್ 12ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ.

ಶ್ರೀದೇವಿರಮ್ಮ ಮಲ್ಲಿಕಾರ್ಜುನ ಸ್ವಾಮಿ ಫಿಲಂಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಈ ಚಿತ್ರ-ಕ್ಕೆ ಶ್ರೀಮತಿ ಅಹಲ್ಯಾ ಸುರೇಶ್ ಅರ್ಪಕರಾಗಿದ್ದಾರೆ. ಸ. ಹರೀಶ್ ಅವರ "ಡೆತ್ ಸರ್ಟಿಫಿಕೆಟ್" ಕಥೆಯನ್ನು ಆಧರಿಸಿ ಚಿತ್ರ ನಿರ್ಮಿಸಲಾಗಿದೆ.



ಚಿತ್ರದ ಮೋಷನ್ ಪೋಸ್ಟರ್, ಟ್ರೇಲರ್ ಹಾಗೂ ಲಿರಿಕಲ್ ವಿಡಿಯೋ ಬಿಡುಗಡೆ ಕಾರ್ಯಕ್ರಮ ಬೆಂಗಳೂರಿನಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಟಿ.ಎಸ್. ನಾಗಾಭರಣ, ನಾಗತಿಹಳ್ಳಿ ಚಂದ್ರಶೇಖರ್, ನಿರ್ಮಾಪಕ ಉಮೇಶ್ ಬಣಕಾರ್ ಹಾಗೂ ಮೇಕಪ್ ಕಲಾವಿದ ರಾಮಕೃಷ್ಣ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಟ್ರೇಲರ್ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿದ ಮೂಗು ಸುರೇಶ್, "ನಾನು ಕೆಲವು ಚಿತ್ರಗಳಿಗೆ ನಿರ್ಮಾಪಕನಾಗಿದ್ದರೂ, ಪೂರ್ಣ ಪ್ರಮಾಣದ ನಿರ್ಮಾಪಕನಾಗಿ ಕೈಹಾಕಿರುವುದು ಇದೇ ಮೊದಲ ಚಿತ್ರ. ಸ್ನೇಹಿತರ ಪ್ರೋತ್ಸಾಹದಿಂದ ನಿರ್ದೇಶನವನ್ನೂ ಮಾಡಿದ್ದೇನೆ.

ನನ್ನದೇ ಹಣ ಹೂಡಿ ನಿರ್ಮಿಸಿರುವ ಈ ಚಿತ್ರ ತಂದೆ-ಮಗನ ಬಾಂಧವ್ಯದ ಕಥೆಯನ್ನು ಹೇಳಲಿದೆ" ಎಂದು ತಿಳಿಸಿದರು.

ಚಿತ್ರದಲ್ಲಿ ಮೂಗು ಸುರೇಶ್ ಜೊತೆಗೆ ಮಂಜುನಾಥ ಹೆಗ್ಡೆ, ರೇಣುಕಾ ಬಾಲಿ, ಶ್ರೀಮಂತ ಹಾಗೂ ವಿನ್ಯಾ ಶೆಟ್ಟಿ ನಟಿಸಿದ್ದಾರೆ.

ಚಿತ್ರಕ್ಕೆ ಸೂರ್ಯಕಾಂತ ಛಾಯಾಗ್ರಹಣ, ಮುತ್ತುರಾಜ್ ಸಂಕಲನ ಹಾಗೂ ಪುಣ್ಯಶ್ ಕುಮಾರ್ ಸಂಗೀತ ನೀಡಿದ್ದಾರೆ. ಚಿತ್ರವನ್ನು ರಾಘವೇಂದ್ರ ಫಿಲಂಸ್ ಹಾಗೂ ಕವಿ ಎಂಟರ್‌ಪ್ರೈಸಸ್ ವಿತರಣೆ ಮಾಡಲಿವೆ.


**ಕರ್ನಾಟಕದ ಬಹುತ್ವ ಸಂಸ್ಕೃತಿಗೆ ಐತಿಹಾಸಿಕ ಸಾಕ್ಷಿ: ಡಾ. ಅಪ್ಪಣ್ಣ ಹಂಜೆ**

# ಶಾಸನಗಳ ಖಜಾನೆ ಲಕ್ಷ್ಮೇಶ್ವರ-ಲಕ್ಕುಂಡಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಲಕ್ಷ್ಮೇಶ್ವರ ಹಾಗೂ ಲಕ್ಕುಂಡಿ ಕರ್ನಾಟಕದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಧಾರೋಹರಗಳಾಗಿವೆ ಎಂದು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಅಪ್ಪಣ್ಣ ಹಂಜೆ ಹೇಳಿದರು.

ಶ್ರೀ ಜಗದ್ಗುರು ಫಕ್ಕೀರೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಯಲ್ಲಿ ನಡೆದ ಬಿ.ಎ. 6ನೇ ಸೆಮಿಸ್ಟರ್ ವಿದ್ಯಾರ್ಥಿಗಳ ಪ್ರಾಜೆಕ್ಟ್ ವರದಿ ಮೌಲ್ಯಮಾಪನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಲಕ್ಷ್ಮೇಶ್ವರ ಹಾಗೂ ಲಕ್ಕುಂಡಿಯಲ್ಲಿ ಪತ್ತೆಯಾಗಿರುವ 150ಕ್ಕೂ ಹೆಚ್ಚು ಶಾಸನಗಳು ಕರ್ನಾಟಕದ ಬಹುತ್ವ ಸಂಸ್ಕೃತಿ ಹಾಗೂ ಚರಿತ್ರೆಯ ವಿವಿಧ ಆಯಾಮಗಳನ್ನು ಪರಿಚಯಿಸುತ್ತವೆ" ಎಂದು ಹೇಳಿದರು.



ಇತಿಹಾಸ ವಿಭಾಗದ ಮುಖ್ಯಸ್ಥೆ ಶೋಭಾ ಯಕ್ಕೇಲಿ, ಪ್ರಾಚಾರ್ಯ ಡಾ. ಉಮೇಶ ಅರಹುಣಸಿ, ಉಪನ್ಯಾಸಕ ಚಂದ್ರಪ್ಪ ತಳವಾರ ಸೇರಿದಂತೆ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

***ಅಬ್ದುಲ್ ಕಲಾಂ ಶಾದಿ ಮಹಲ್‌ಗೆ ನೂತನ ಪದಾಧಿಕಾರಿಗಳ ನೇಮಕ**

# ಅಸುಂಡಿ ಅಂಜುಮನ್ ಕಮಿಟಿ ಅಧ್ಯಕ್ಷರಾಗಿ ಹಸನಸಾಬ ಓಲೇಕಾರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಸುಂಡಿ ಗ್ರಾಮದಲ್ಲಿ ಸಮಸ್ತ ಮುಸ್ಲಿಂ ಬಾಂಧವರ ಸಮ್ಮುಖದಲ್ಲಿ ನೂತನ ಅಂಜುಮನ್ ಕಮಿಟಿ ಹಾಗೂ ಅಬ್ದುಲ್ ಕಲಾಂ ಶಾದಿ ಮಹಲ್ ಕಮಿಟಿಯ ಪದಾಧಿಕಾರಿಗಳನ್ನು ಒಮ್ಮತದಿಂದ ಆಯ್ಕೆ ಮಾಡಲಾಯಿತು.

ಗ್ರಾಮದಲ್ಲಿ ನಡೆದ ಸಭೆಯಲ್ಲಿ ಮಲ್ಲಸಮುದ್ರ ಗ್ರಾಮದ ಮುಫ್ತಿ ಅಬ್ದುಲ್ ಸಮದ ಅ. ಜಕಾತಿ ಅವರ ಉಪಸ್ಥಿತಿಯಲ್ಲಿ ಪಂಚರು ಹಾಗೂ ಗ್ರಾಮಸ್ಥರು ಸೇರಿಕೊಂಡು ಕಮಿಟಿಯ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿದರು.

ನೂತನ ಕಮಿಟಿಯ ಅಧ್ಯಕ್ಷರಾಗಿ ಹಸನಸಾಬ ತಾ. ಓಲೇಕಾರ ಆಯ್ಕೆಯಾಗಿದ್ದು, ಉಪಾಧ್ಯಕ್ಷರಾಗಿ ಕಾಸೀಮಸಾಬ ಹು. ಭಾವಿಕಟ್ಟಿ, ಗೌರವಾಧ್ಯಕ್ಷರಾಗಿ ಬಾಬುಸಾಬ ನದಾಫ್,



ಕಾರ್ಯದರ್ಶಿಯಾಗಿ ಅಲ್ಲಾಭಕ್ಷಿ ಮಾ. ನದಾಫ್ ಹಾಗೂ ಖಜಾಂಚಿಯಾಗಿ ರಾಜೇಸಾಬ ದಾ. ಬೆಳ್ಳಿಕೊಪ್ಪ ಆಯ್ಕೆಯಾದರು.

ಸದಸ್ಯರಾಗಿ ಯತೀಮಸಾಬ ಗುಳಗುಂದಿ, ಹುಜೇಫಾ ಡಾಲಾಯತ, ರಫೀಕ್ ಅ. ನದಾಫ್, ಯಾಸೀನ್ ನ. ಭಾವಿಕಟ್ಟಿ, ರಫೀಕ್ ಶ. ಬಿಂಕದಕಟ್ಟಿ, ಇಸ್ಮಾಯಿಲ್ ಧಾರವಾಡ ಹಾಗೂ ಮಾಬುಸಾಬ ಹು. ಕಾಗದಗಾರ ಅವರನ್ನು ನೇಮಕ ಮಾಡಲಾಯಿತು.

ಸಭೆಯಲ್ಲಿ ಗ್ರಾಮಾಭಿವೃದ್ಧಿ, ಸಮುದಾಯದ ಏಕತೆ ಹಾಗೂ ಶಾದಿ ಮಹಲ್‌ನ ಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಲಾಯಿತು. ನೂತನ ಪದಾಧಿಕಾರಿಗಳು ಸಮಾಜದ ಅಭಿವೃದ್ಧಿಗಾಗಿ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಭರವಸೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾಬುಸಾಬ ಅ. ಡಾಲಾಯತ, ದೂದುಸಾಬ ಮ. ಜಮಾಲಖಾನವರ, ಹಸನಸಾಬ ರಾ. ನದಾಫ, ಗಫಾರಸಾಬ ರಾ. ಬೆಂತೂರ, ರಫೀಕ್ ಬುರಬುರೆ, ಬಬಲಿಸಾಬ ಕೊತಬಾಳ, ಶರೀಫಸಾಬ ಬಿಂಕದಕಟ್ಟಿ, ಮಕ್ತುಮಸಾಬ ಓಲೇಕಾರ, ತಾಜುದ್ದೀನ್ ಓಲೇಕಾರ, ಯೂಸುಫಸಾಬ ಧಾರವಾಡ, ಮಕ್ಬೂಲ್ ಗುಳಗುಂದಿ, ರಿಯಾಜ್ ಮುಲ್ಲಾನವರ ಸೇರಿದಂತೆ ಗ್ರಾಮದ ಹಿರಿಯರು ಹಾಗೂ ಯುವಕರು ಉಪಸ್ಥಿತರಿದ್ದರು.

**ಹೆಚ್ಚುವರಿ ದರಕ್ಕೆ ರಸಗೊಬ್ಬರ ಮಾರಾಟ ಆರೋಪ; ಕರವೇಯಿಂದ ರಸ್ತೆ ತಡೆದು ಆಕ್ರೋಶ**

# ಲಿಂಕ್ ಗೊಬ್ಬರ ದಂಧೆ ಬಂದ್ ಮಾಡ್ರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಕೆಲ ಗೊಬ್ಬರ ಅಂಗಡಿಗಳಲ್ಲಿ ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡಲಾಗುತ್ತಿದೆ ಎಂದು ಆರೋಪಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪಟ್ಟಣದ ಪಾದಗಟ್ಟಿ ಸಮೀಪ ಬಜಾರ್ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ ಹಾಗೂ ತಾಲೂಕು ಅಧ್ಯಕ್ಷ ಲೋಕೇಶ ಸುತಾರ, "ಡಿ.ಎ.ಪಿ. ಗೊಬ್ಬರ ದಾಸ್ತಾನು ಇದ್ದರೂ ಇಲ್ಲವೆಂದು ಹೇಳಿ ರೈತರಿಗೆ ವಿತರಣೆ ಮಾಡುತ್ತಿಲ್ಲ. ಕೆಲ ಅಂಗಡಿ ಮಾಲೀಕರು ಡಿ.ಎ.ಪಿ. ಜೊತೆ ಇತರೆ ಗೊಬ್ಬರಗಳನ್ನು ಕಡ್ಡಾಯವಾಗಿ ಖರೀದಿಸುವಂತೆ ಒತ್ತಾಯಿಸುತ್ತಿದ್ದಾರೆ. ಅಲ್ಲದೇ ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ" ಎಂದು ಆರೋಪಿಸಿದರು.



ಕೆಲ ವ್ಯಾಪಾರಿಗಳು ಗೊಬ್ಬರವನ್ನು ಬೇರೆ ಬೇರೆ ಸ್ಥಳಗಳಲ್ಲಿ ಸಂಗ್ರಹಿಸಿಟ್ಟಿದ್ದು, ಇದು ನಿಯಮ ಉಲ್ಲಂಘನೆಯಾಗಿದೆ. ಗೊಬ್ಬರ ಅಂಗಡಿಗಳ ಮುಂಭಾಗದಲ್ಲಿ ಸರ್ಕಾರ ನಿಗದಿಪಡಿಸಿದ ದರಪಟ್ಟಿ ಪ್ರದರ್ಶಿಸಬೇಕು. ನಕಲಿ ಬಿಲ್ ನೀಡುತ್ತಿರುವ ಅಂಗಡಿ ಮಾಲೀಕರ ವಿರುದ್ಧ ಕ್ರಮ ಕೈಗೊಂಡು ಪರವಾನಗಿ ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.ವಾರದೊಳಗೆ ಸಮಸ್ಯೆ ಬಗೆಹರಿಸದಿದ್ದರೆ ರಾಜ್ಯ ಹೆದ್ದಾರಿ ಬಂದ್ ಮಾಡಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು. ಪ್ರತಿಭಟನೆ ವೇಳೆ ಶಿರಹಟ್ಟಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಶಿವಕುಮಾರ ಕಾಶಪ್ಪನವರ ಅವರನ್ನು ಕಾರ್ಯಕರ್ತರು ತರಾಟೆಗೆ ತೆಗೆದುಕೊಂಡರು. "ಇಷ್ಟು ದಿನಗಳಿಂದ ಅಕ್ರಮ ನಡೆಯುತ್ತಿದ್ದರೂ ಅಧಿಕಾರಿಗಳು ಕ್ರಮ ಕೈಗೊಂಡಿಲ್ಲ. ಈ ಅಕ್ರಮದಲ್ಲಿ ಕೆಲ ಅಧಿಕಾರಿಗಳ ಕೈವಾಡವೂ ಇದೆ" ಎಂದು ಆರೋಪಿಸಿದರು.

> "ರೈತರಿಗೆ ಬೇಕಾದ ಗೊಬ್ಬರವನ್ನು ಕೃತಕವಾಗಿ ತಡೆದು ಹೆಚ್ಚುವರಿ ದರಕ್ಕೆ ಮಾರಾಟ ಮಾಡುವುದು ರೈತರ ಮೇಲಿನ ದೌರ್ಜನ್ಯ. ಕೂಡಲೇ ಅಕ್ರಮ ತಡೆಗಟ್ಟಬೇಕು."
>
> **–ಬಸವರಾಜ ಹೊಗೆಸೊಪ್ಪಿನ,** ಕರವೇ ಜಿಲ್ಲಾ ಪ್ರಕಾರ್ಯದರ್ಶಿ

ಸ್ಥಳಕ್ಕೆ ಆಗಮಿಸಿದ ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿದರು. ಕೃಷಿ ಅಧಿಕಾರಿ ಚಂದ್ರಶೇಖರಗೌಡ ನರಸಮ್ಮನವರ, ಪಿಎಸ್‌ಐ ನಾಗರಾಜ ಗಡದ ಹಾಗೂ ಕ್ರೈಂ ಪಿಎಸ್‌ಐ ಟಿ.ಕೆ. ರಾಠೋಡ ಭದ್ರತಾ ವ್ಯವಸ್ಥೆ ಕೈಗೊಂಡಿದ್ದರು.

ಪ್ರತಿಭಟನೆಯಲ್ಲಿ ತಾಲೂಕು ಗೌರವಾಧ್ಯಕ್ಷ ಪ್ರವೀಣ ಗಾಣಗೇರ, ಬಸವರಾಜ ಮಲ್ಲೂರ, ಅರುಣ ಮೆಕ್ಕಿ, ಗಂಗಾಧರ ಕರ್ಜಕಣ್ಣವರ, ಗಂಗಾಧರ ಕೊಂಚಿಗೇರಿಮಠ, ಮಂಜುನಾಥ ಕೊಡಳ್ಳಿ, ಫಕ್ಕೀರೇಶ ಅಣ್ಣಿಗೇರಿ, ಚನ್ನಬಸಯ್ಯ ಗಡ್ಡದೇವರಮಠ, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಸಾವಿತ್ರಿ ಅತ್ತಿಗೇರಿ, ಹುಲಿಗೆಮ್ಮ ಮೇವುಂಡಿ, ಜಯಮ್ಮ ತುಪ್ಪದ, ಲಕ್ಷ್ಮಕ್ಕ ಪಶುಪತಿಹಾಳ, ರೇಷ್ಮಾ ಜಾದವ, ಸಾವಕ್ಕ ಮಳ್ಳೊಳ್ಳಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಜನಪರ ವೇದಿಕೆಗೆ ಅಶೋಕ ಹುಬ್ಬಳ್ಳಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಯ ಕರ್ನಾಟಕ ಜನಪರ ವೇದಿಕೆಯ ಶಿರಹಟ್ಟಿ ತಾಲೂಕು ಅಧ್ಯಕ್ಷರಾಗಿ ಅಶೋಕ ಪರಸಪ್ಪ ಹುಬ್ಬಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ.



ಸಂಸ್ಥಾಪಕ ಬಿ. ಗುಣರಂಜನ ಶೆಟ್ಟಿ, ರಾಜ್ಯಾಧ್ಯಕ್ಷ ಜೆ. ಶ್ರೀನಿವಾಸ್ ಹಾಗೂ ಜಿಲ್ಲಾಧ್ಯಕ್ಷ ಸಣ್ಣಯಲ್ಲಪ್ಪ ವಳಗೇರಿ ಅವರು ಈ ಆಯ್ಕೆ ಘೋಷಿಸಿದ್ದಾರೆ.

# ವಿದ್ಯಾರ್ಥಿನಿಯರಿಗೆ ಉಚಿತ ಪಠ್ಯಪುಸ್ತಕ ವಿತರಣೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಉಚಿತ ಪಠ್ಯಪುಸ್ತಕ ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ವೀರಪ್ಪ ಬಿ. ಮುಕ್ಕಣ್ಣವರ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಿ ಮಾತನಾಡಿ, "ಶಿಕ್ಷಣವು ಮಕ್ಕಳ ಭವಿಷ್ಯ ರೂಪಿಸುವ ಪ್ರಮುಖ ಸಾಧನವಾಗಿದೆ. ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸ ಮಾಡಬೇಕು" ಎಂದು ಕರೆ ನೀಡಿದರು. ಶಾಲೆಯ ಮುಖ್ಯಗುರು ಎಸ್.ಬಿ. ಗವಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿ, ಪಠ್ಯಪುಸ್ತಕಗಳನ್ನು ಜೋಪಾನವಾಗಿ ಬಳಸಿಕೊಂಡು



ಶೈಕ್ಷಣಿಕ ಪ್ರಗತಿಗೆ ಒತ್ತು ನೀಡುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎಸ್.ಎ. ಪಲ್ಲೇದ, ಪಿ.ಜಿ. ಹುಯಿಲಗೋಳ, ಎಸ್.ಎಸ್. ಯಲ್ಲರಡ್ಡಿ ಹಾಗೂ ಇತರ ಗುರುಮಾತೆಯರು ಉಪಸ್ಥಿತರಿದ್ದರು. ವಿದ್ಯಾರ್ಥಿನಿಯರು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಪಠ್ಯಪುಸ್ತಕಗಳನ್ನು ಸ್ವೀಕರಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka